MAA ಫ್ರೆಂಡ್ಸ್ ಸಾರಥ್ಯದಲ್ಲಿ...
ನಾಡಿನ ಸಮಸ್ತ ಜನತೆಗೆ ಕನ್ನಡ ರಾಜ್ಯೋತ್ಸವದ ಶುಭಾಶಯಗಳು

# ಯುವ ಮಾರ್ಗ

YUVA MARGA NEWS PAPER · VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111
YUVA MARGA KANNADA DAILY NEWS PAPER
ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 05 | ಸಂಚಿಕೆ: 18 | ಶನಿವಾರ : 01-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00
VOLUME: 05 | ISSUE: 18 | SATURDAY : 01-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ನಾಳೆ 11 ಜಿಲ್ಲೆಗಳ 316 ಕೇಂದ್ರಗಳಲ್ಲಿ ಕೆ-ಸೆಟ್ ಪರೀಕ್ಷೆ, ಕ್ಯಾಮರಾ ಕಣ್ಗಾವಲು




**ಬೆಂಗಳೂರು,ಅ,31–** ಪದವಿ ಕಾಲೇಜು ಉಪನ್ಯಾಸಕರ ಅರ್ಹತಾ ಪರೀಕ್ಷೆಯಾದ ಕೆ-ಸೆಟ್ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಭಾನುವಾರ (ನ.2) ನಡೆಸಲಿದ್ದು, ಕಟ್ಟುನಿಟ್ಟಿನ ಬಿಗಿ ಕ್ರಮಗಳನ್ನು ಕೈಗೊಂಡಿದೆ. ಈ ಬಾರಿಯೂ ಮುಖಚಹರೆ ಪತ್ತೆ ತಂತ್ರಜ್ಞಾನದ ಮೂಲಕ ಅಭ್ಯರ್ಥಿಗಳನ್ನು ತಪಾಸಣೆ ಮಾಡಿಯೇ ಪರೀಕ್ಷಾ ಕೇಂದ್ರಕ್ಕೆ ಬಿಡಲಾಗುತ್ತದೆ. ಕ್ಯಾಮರಾ ಕಣ್ಗಾವಲಿನಲ್ಲಿ ಪರೀಕ್ಷೆ ನಡೆಯಲಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಒಟ್ಟು 33 ವಿಷಯಗಳಿಗೆ ನಡೆಯುವ ಕೆ-ಸೆಟ್ ಪರೀಕ್ಷೆಯನ್ನು 1.36 ಲಕ್ಷ ಮಂದಿ ತೆಗೆದುಕೊಂಡಿದ್ದಾರೆ. 11 ಜಿಲ್ಲೆಗಳ (ಬೆಂಗಳೂರು, ಬಳ್ಳಾರಿ, ಬೆಳಗಾವಿ, ದಾವಣಗೆರೆ, ಧಾರವಾಡ, ಕಲಬುರ್ಗಿ, ಮಂಗಳೂರು, ಮೈಸೂರು, ಶಿವಮೊಗ್ಗ, ತುಮಕೂರು, ವಿಜಯಪುರ) 316 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ ಅವರು ವಿವರಿಸಿದ್ದಾರೆ.

ಬೆಂಗಳೂರಿನಲ್ಲಿ ಎಲ್ಲ 33 ವಿಷಯಗಳ ಪರೀಕ್ಷೆ (2ನೇ ಪುಟಕ್ಕೆ)

### ಅರಕೇರಾ ಪಟ್ಟಣದಲ್ಲಿ ಹೆಚ್ಚಿದ ಬೀದಿ ನಾಯಿಗಳ ಹಾವಳಿ

## ಮಕ್ಕಳು, ವೃದ್ಧರು, ಮಹಿಳೆಯರು ಓಡಾಡುವುದೇ ಕಷ್ಟ

ಯುವ ಮಾರ್ಗ ಸುದ್ದಿ


**ಅರಕೇರಾ,ಅ.31–**ಪಟ್ಟಣದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಎಲ್ಲೆಂದರಲ್ಲಿ ಗುಂಪು ಗುಂಪಾಗಿ ಇರುವದರಿಂದ ಸಾರ್ವಜನಿಕರು, ಶಾಲಾ ಮಕ್ಕಳು ಒಬ್ಬಂಟಿಯಾಗಿ ಓಡಾಡುವುದೇ ಕಷ್ಟವಾಗಿದೆ.

ಪಟ್ಟಣದಲ್ಲಿ ಬಸನಿಲ್ದಾಣದ ಸುತ್ತಮುತ ಹಾಗೂ ಎಲ್ಲಾ ಅರಕೇರಾ ಪಟ್ಟಣದ ಎಲ್ಲಾ ವಾರ್ಡ್‌ಗಳಲ್ಲಿಯೂ ಬೀದಿನಾಯಿಗಳು ಒಂದೊಂದು ಗುಂಪು ಹೆಚ್ಚಾಗಿದ್ದು, ಜನ ಓಡಾಡುವಾಗ ಮತ್ತು ವಾಹನ ಚಲಾಯಿಸುವ ವೇಳೆ ಹಿಂಬಾ ಲಿಸಿಕೊಂಡು ಬೊಗಳುತ್ತವೆ ಇದರಿಂದಾಗಿ ಗಾಬರಿ ಗೊಂಡು ಎಷ್ಟು ವಾಹನ ಸವಾರರು ಗಾಡಿಯಿಂದ ಬಿದ್ದು ಪೆಟ್ಟಾಗಿವೆ. ಚಿಕ್ಕಮಕ್ಕಳು ಮನೆಯಿಂದ ಶಾಲೆ ಗೆ ನಡೆದುಕೊಂಡು ಹೋಗುವಾಗ

ವಿದ್ಯಾರ್ಥಿಗಳು ಶಾಲಾ-ಕಾಲೇಜಿಗೆ, ವಯೋವೃದ್ಧರು ವಾಯು ವಿಹಾರಕ್ಕೆ ತೆರಳುವ ವೇಳೆ ನಾಯಿಗಳು ದಾಳಿ ನಡೆಸುತ್ತವೆ. ಈಗಾಗಲೇ ಬಸ್ ನಿಲ್ದಾಣ ಹತ್ತಿರದ ಮನೆಯ ಮುಂದೆ ನಿಂತು ಕೊಂಡಿರುವ ಆಕಳ ಕರುವನ್ನು ನಾಯಿಗಳ ಗುಂಪು ಗುಂಪಾಗಿ ಸೇರಿಕೊಂಡು ಕರುವನ್ನು ಮನಸ್ಸಿಗೆ ಬಂದಂತೆ ಕಚ್ಚಿ ಕರುವನ್ನು ಜೀವಾಂತವಾಗಿ ತಿಂದುಹಾಕಿವೆ.ಇದನ್ನು ಕಣ್ಣಾರೆ ಕಂಡ ಸಾರ್ವಜನಿಕರು ನಮ್ಮ ಮಕ್ಕಳು ಮನೆಯ ಮುಂದಿನ ಆವರಣದಲ್ಲಿ ಆಟವಾಡಲು ಹೊರಗಡೆ ಕಳುಹಿಸಲು ಭಯಭೀತರಾಗಿದ್ದಾರೆ

ನಾಯಿಗಳ ಹಾವಳಿಯಿಂದ ರಸ್ತೆಯಲ್ಲಿ ಓಡಾಡುವುದು ಕಷ್ಟವಾಗಿದೆ. ಮನೆಗೆ ಅವಶ್ಯಕ ವಸ್ತು ತರಲು ಅಂಗಡಿಗೆ ಮಕ್ಕಳನ್ನು ಕಳುಹಿಸಲು ಭಯಪಡುವಂತಾಗಿದೆ ಎಂದು ಸಾರ್ವಜನಿಕರು ತಮ್ಮ ನೋವನ್ನು ಸುದ್ದಿಗಾರರ ಮುಂದೆ ಹೇಳಿಕೊಂಡಿದ್ದಾರೆ.

ಚಿಕ್ಕ ಮಕ್ಕಳು ಖಾಸಗಿ ಶಾಲಾ ಬಸ್‌ಗೆ ಹೋಗುವ ವೇಳೆ



ಬೀದಿ ನಾಯಿಗಳ ಕಾಟ ಹೆಚ್ಚಾಗಿರುವುದರಿಂದ ಪೋಷಕರು ಜೊತೆಗೆ ಬಂದು ಬಸ್ಸಿ ನಲ್ಲಿ ಕೂಡಿಸಿ ಮನೆಗೆ ಹೊಗುವ ದೃಶ್ಯ ಸಾಮಾನ್ಯವಾಗಿ ಕಂಡುಬರುತ್ತದೆ.

ಸುರಕ್ಷತೆ ಇಲ್ಲದೆ ಆತಂಕ: ಯಾವುದೇ ಭಯವಿಲ್ಲದೇ ಬೀದಿ ನಾಯಿಗಳು ಹಿಂಡುಗಟ್ಟಿ ರಾಜಾರೋಷವಾಗಿ ಓಡಾಡುತ್ತಿವೆ. ಎಲ್ಲೆಂದರಲ್ಲಿ ಬಿಸಾಡಿದ ಮಾಂಸದ ತುಂಡು, ಹೋಟೆಲ್ ಮಾಂಸ ತ್ಯಾಜ್ಯದ ರುಚಿ ಕಂಡ ನಾಯಿಗಳು ಆಕಳು ಕರುವಿನ ಮೇಲೆ ದಾಳಿ ಮಾಡಿ ಕೊಂದು ಅದನ್ನು ಎಲ್ಲಾ ನಾಯಿಗಳು ತಿಂದಿವೆ.ಬೆಳಗ್ಗೆ ಶಾಲೆಗೆ ಹೋಗುವ ಮಕ್ಕಳು, ವಾಕಿಂಗ್‌ಗೆ ಹೋದವರು, ಪಾದಚಾರಿಗಳು ಸುರಕ್ಷಿತವಾಗಿ ಮನೆಗೆ ಮರಳುವ ಭರವಸೆ ಇಲ್ಲದಂತಾಗಿದೆ.

ಬೀದಿ ನಾಯಿಗಳ ಹಾವಳಿಯಿಂದ ಶಾಲಾ ಮಕ್ಕಳು, ವಯೋವೃದ್ಧರು ಭಯಭೀತರಾಗಿದ್ದಾರೆ. ಬೀದಿ ನಾಯಿಗಳ ಹಾವಳಿ ತಪ್ಪಿಸಲು ಗ್ರಾಮಪಂಚಾಯತ್ ಆಡಳಿತ ಸೂಕ್ತ ಕ್ರಮ ಕೈಕೊಳ್ಳಬೇಕು.

## ಸ್ಪರ್ಧಾತ್ಮಕ ಪರೀಕ್ಷೆಯ ಪೂರ್ವಭಾವಿ ತರಬೇತಿ: ಸಿದ್ಧತಾ ಸಭೆ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.31–**ಹಿಂದುಳಿದ ರಾಯಚೂರು ಜಿಲ್ಲೆಯ ವಿದ್ಯಾರ್ಥಿಗಳು ಐಎಎಸ್, ಐಪಿಎಸ್, ಐಆರ್‌ಎಸ್, ಕೆಎಎಸ್ ಪಾಸು ಮಾಡಬೇಕು. ಶೈಕ್ಷಣಿಕವಾಗಿ ಪ್ರಗತಿ ಸಾಧಿಸಬೇಕು ಎನ್ನುವ ಆಶಯದಡಿ ಯೋಚಿಸಿ, ಯೋಜಿಸಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಪ್ರಪ್ರಥಮ ಬಾರಿಗೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಜಿಲ್ಲಾಡಳಿತದಿಂದ ಪ್ರಪ್ರಥಮ ಬಾರಿಗೆ ರಾಯಚೂರ ಜಿಲ್ಲೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯ ತರಬೇತಿ ಶಿಬಿರ ಆಯೋಜನೆ ಮಾಡಿದ್ದಾರೆ.

ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಾರ್ವಜನಿಕ ಗ್ರಂಥಾಲಯ ಇಲಾಖೆ ಇವರ ಸಹಯೋಗದಲ್ಲಿ ಹಮ್ಮಿಕೊಂಡ ಈ ತರಬೇತಿ ಶಿಬಿರದ ಸಿದ್ಧತಾ ಸಭೆಯು ಅಕ್ಟೋಬರ್ 30 ರಂದು ಜಿಲ್ಲಾ ರಂಗಮಂದಿರ ಹಿಂದುಗಡೆಯ ಜಿಲ್ಲಾ ಕೇಂದ್ರ ಗ್ರಂಥಾಲಯದ ಸಭಾಂಗಣದಲ್ಲಿ ನಡೆಯಿತು.

ಈ ತರಬೇತಿ ಶಿಬಿರದ ನೋಡಲ್ ಅಧಿಕಾರಿಗಳಾದ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರವೀಣಕುಮಾರ, ತಹಸೀಲ್ದಾರರಾದ ಸುರೇಶ ವರ್ಮಾ, ಅಮರೇಶ ಬಿರಾದಾರ, ಪ್ರಚಾರ ಸಮಿತಿಯ ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಶಿಕ್ಷಕರ ಆಯ್ಕೆ ಸಮಿತಿಯ ಸದಸ್ಯರು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಅಧಿಕಾರಿ ವೀರೇಶ ನಾಯಕ, ಸಮನ್ವಯ ಸಮಿತಿಯ



ಸದಸ್ಯರು ಹಾಗೂ ಜಿಲ್ಲಾ ಗ್ರಂಥಾಲಯ ಅಧಿಕಾರಿ ನಿರ್ಮಲಾ ಹೆಚ್ ಹೊಸೂರ ಅವರು ಸಭೆ ನಡೆಸಿ ಕಾರ್ಯಕ್ರಮದ ರೂಪುರೇಷಗಳ ಬಗ್ಗೆ ಸಮಗ್ರ ಚರ್ಚಿಸಿದರು.

ಈ ಉಚಿತ ತರಬೇತಿಯ ಅರ್ಹತಾ ಪರೀಕ್ಷೆಯನ್ನು ನವೆಂಬರ್ 12ರಂದು ಮಧ್ಯಾಹ್ನ 3 ರಿಂದ 4.30ರವರೆಗೆ ರಾಯಚೂರಿನ ಜಿಲ್ಲಾ ರಂಗಮಂದಿರ ಹತ್ತಿರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ನಡೆಸುವ ಬಗ್ಗೆ ಸಭೆಯಲ್ಲಿ ನಿರ್ಣಯಿಸಲಾಯಿತು. ಈ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆಯುವ ಮೊದಲ 100 ಅಭ್ಯರ್ಥಿಗಳಿಗೆ ಮಾತ್ರ ತರಬೇತಿಗೆ ಅವಕಾಶವಿರಲಿದೆ.

ನವೆಂಬರ್ 1ರಿಂದ ನೋಂದಣಿ ಪ್ರಕ್ರಿಯೆ ಆರಂಭಿಸಿ ನವೆಂಬರ್ 8ರವರೆಗೆ ಹೆಸರು ನೋಂದಣಿಗೆ ಅವಕಾಶ ನೀಡಬೇಕು. ಕಡ್ಡಾಯವಾಗಿ ಪಿಯುಸಿ ಪಾಸಾದ ಹಾಗೂ ಪದವಿ ಓದುತ್ತಿರುವ ಅಥವಾ ಪದವಿ ಪೂರ್ಣಗೊಳಿಸಿದ ರಾಯಚೂರ ಸೇರಿದಂತೆ ರಾಜ್ಯದ ಯಾವುದೇ ಭಾಗದ ಆಸಕ್ತ ಅಭ್ಯರ್ಥಿಗಳು ಕ್ಯುಆರ್ (2ನೇಪುಟಕ್ಕೆ)

## ವಿಶ್ವಕರ್ಮರಿಗೆ ರಾಜಕೀಯ ಪ್ರಜ್ಞೆ ಮೂಡಿಸಲು ನಿರಂತರ ಶ್ರಮ : ಕೆ.ಪಿ.ನಂಜುಂಡಿ

ಯುವ ಮಾರ್ಗ ಸುದ್ದಿ




**ಲಿಂಗಸುಗೂರು,ಅ.31–** ಯಾವುದೇ ಜನ ಸಮುದಾಯ ಅಭಿವೃದ್ಧಿ ಹೊಂದಬೇಕಾದರೆ ಆ ಸಮುದಾಯಕ್ಕೆ ರಾಜಕೀಯ ಪ್ರಜ್ಞೆ ಮತ್ತು ಒಗ್ಗಟ್ಟು ಅಗತ್ಯವಾಗಿದೆ. ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯಾಧ್ಯಕ್ಷ, ವಿಧಾನಸಭಾ ಮಾಜಿ ಸದಸ್ಯ ಕೆ.ಪಿ ನಂಜುಂಡಿ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದೇಶದ ಸಂಸ್ಕೃತಿ, ಶಿಲ್ಪ ಕಲೆಗೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ. ವೈಧಿಕ ಪರಂಪರೆಯೊಂದಿಗೆ ದೇವರ ಅನುಗ್ರಹ ಗಳಿಸುವ ಸಮಾಜವಾಗಿದೆ. ಕಟ್ಟಿಗೆ, ಕಬ್ಬಿಣ, ಬೆಳ್ಳಿ, ಬೆಳ್ಳಿ, ಬಂಗಾರ, ಕಲ್ಲಿನ ಶಿಲೆಗಳ ಕೆತ್ತನೆ ಒಳಗೊಂಡು ವಿರ್ಶಕರ್ಮ ಸಮುದಾಯಕ್ಕೆ ಐದು ವಿದ್ಯೆಗಳು ಹುಟ್ಟುತ್ತಲೇ ಒಲಿದು ಬರುತ್ತದೆ. ಈಷ್ಟೆಲ್ಲ ಹಿರಿಮೆ-ಗರಿಮೆ ಹಾಗೂ ದೇಶದ ಐತಿಹಾಸಿಕ ಪರಂಪರೆಯ ದ್ಯೋತಕವಾಗಿದ್ದಾರೆ. ಆದ ಸಮುದಾಯದಲ್ಲಿ ಒಗ್ಗಟ್ಟು ಇಲ್ಲದೇ ಇರುವುದರಿಂದ ವಿಶ್ವಕರ್ಮ ಸಮಾಜಕ್ಕೆ ರಾಜಕೀಯ ಪ್ರಜ್ಞೆ ಇಲ್ಲದಂತಾಗಿದೆ. ಕಳೆದ 25 ವರ್ಷಗಳಿಂದ ವಿಶ್ವಕರ್ಮ ಸಮಾಜದ ಒಗ್ಗಟ್ಟು ಮೂಡಿಸಲು ನಿರಂತರ ಶ್ರಮ ವಹಿಸುತ್ತಿವೆ ಎಂದು ತಿಳಿಸಿದರು.

ಹಿಂದುಳಿದ ವರ್ಗದಲ್ಲಿ ಗ್ರದಲ್ಲಿ 102ಕ್ಕೂ ಅಧಿಕ ಕಾಯಕ ಸಮುದಾಯಗಳು ಇವೆ. ಈ ಪೈಕಿ ಮುರಾಲ್ಕು ಸಮುದಾಯಗಳು ಮಾತ್ರ ರಾಜಕೀಯ, ಸಾಮಾಜಿಕ, ಆರ್ಥಿಕಕತೆ ಅಭಿವೃದ್ಧಿಗೆ ಸರ್ಕಾರದ ಸೌಲತ್ತು ಬಳಿಸಿಕೊಳ್ಳುತ್ತಿವೆ. ಉಳಿದಂತೆ ಹಿಂದುಳಿದ ಇತರೇ ವರ್ಗದ ಜನರಿಗೆ ಸೌಲತ್ತುಗಳು ಮರಿಚೀಕೆಯಾಗಿವೆ. ಪ್ರಮುಖವಾಗಿ ವಿಶ್ವಕರ್ಮ ಸಮಾಜಕ್ಕೆ ಯಾವುದೇ ಪ್ರಾತಿನಿಧ್ಯ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.


ವಿಶ್ವಕರ್ಮ ಸಮಾಜವನ್ನು ಎಸ್.ಟಿ ಪಟ್ಟಿಗೆ ಸೇರಿಸಲು ಕುಲಶಾಸ್ತ್ರ ಅಧ್ಯಯನ ಮಾಡಿಸಲಾಗಿದೆ. ಆದರೆ ಜಾರಿಗೆ ಬರುತ್ತಿಲ್ಲ. ವಿಶ್ವಕರ್ಮ ಸಮಾಜವು ರಾಜಕೀಯ ಪ್ರಜ್ಞೆ ಬೆಳಸಿಕೊಂಡು ಒಗ್ಗಟ್ಟು ಆಗಬೇಕು. ಅಂದಾಗ ಮಾತ್ರ ಸಮಾಜವು ಮೇಲಸ್ತರದಲ್ಲಿ ಬೆಳೆಯುತ್ತದೆ. ವಿಶ್ವಕರ್ಮ ಜನರಲ್ಲಿ ಒಗ್ಗಟ್ಟು ಇಲ್ಲದಂತಾಗಿದೆ. ಇದಕ್ಕಾಗಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರಂತೆ ಶಿಕ್ಷಣ ಪಡೆದು ಸಂಘಟಿತರಾಗಿ ತಮ್ಮ ಹಕ್ಕು ಪಡೆಯಲು ಹೋರಾಟ ಮಾಡಬೇಕೆಂದು ಕರೆ ನೀಡಿದರು.

ಡಿಸೆಂಬರ್ ತಿಂಗಳಲ್ಲಿ ಬೆಂಗಳೂರಿನಲ್ಲಿ ವಿಶ್ವಕರ್ಮ ಯಜ್ಞ ಮಾಡಿ, ವಿಶ್ವಕರ್ಮ ಸಮುದಾಯದವನ್ನು ಒಗ್ಗೂಡಿಸಲಾಗುವುದು, ಇದೇ ಸಂದರ್ಭದಲ್ಲಿ ವಿಶ್ವಕರ್ಮ ಸಮುದಾಯವನ್ನು ಎಸ್‌ಟಿಗೆ ಸೇರಿಲಸು ಶ್ರಮಿಸಲಾಗುತ್ತದೆ ಪರಿಶಿಷ್ಟ ಪಂಗಡಕ್ಕೆ ಸಮುದಾಯವನ್ನು ಸೇರ್ಪಡ ಮಾಡಿದರೆ ಸಮುದಾಯದ ಮಕ್ಕಳಿಗೆ ಶಿಕ್ಷಣದ ಪಡೆಯಲು ಸಾಧ್ಯವಾಗುತ್ತದೆ. ಇದನ್ನು ಅರಿತು ಸರ್ಕಾರ ಸೂಕ್ತ ವ್ಯವಸ್ಥೆ ಮಾಡಬೇಕೆಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ನಾಗಮೂರ್ತಿ, ದೇವೆಂದ್ರಪ್ಪ ವಿಶ್ವಕರ್ಮ ಮಹಾಸಭಾದ ಜಿಲ್ಲಾಧಕ್ಷ ಬ್ರಹ್ಮ ಗಣೇಶ ಪತ್ತಾರ, ತಾಲೂಕ ಅಧ್ಯಕ್ಷ ಗುಂಡಣ್ಣ ಪತ್ತಾರ ಗುರುಗುಂಟಾ, ಕಾಳಪ್ಪ, ಅಮರೇಶ, ಮಂಜುಳಾ, ಸಿದ್ದು ಬಡಿಗೇರ ಸೇರಿದಂತೆ ಇದ್ದರು.

## ರಾಷ್ಟ್ರೀಯ ಏಕತೆಗೆ ಪಟೇಲರ ಕೊಡುಗೆ ಅಪಾರ- ರಮೇಶಬಾಬು ಯಾಳಗಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.31–**ರಾಷ್ಟ್ರದ ಏಕತೆ ಮತ್ತು ಸಾರ್ವಭೌಮತೆಯನ್ನು ಕಾಪಾಡಿದ ದೇಶದ ಮೊದಲ ಉಪಪ್ರಧಾನಿ, ಗೃಹಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಕೊಡುಗೆ ಅಪಾರವಾದುದಾಗಿದೆ ಎಂದು ಸಾಹಿತಿ ರಮೇಶಬಾಬು ಯಾಳಗಿ ಹೇಳಿದರು

ಅವರು ಪಟ್ಟಣದ ಕಲ್ಮಠ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನಾ ಘಟಕದ ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ಏಕತಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

2014 ರಿಂದ ಕೇಂದ್ರ ಸರಕಾರ ರಾಷ್ಟ್ರೀಯ ಏಕತಾ ದಿನಾಚರಣೆಯನ್ನು ದೇಶಾದ್ಯಂತ ಆಚರಿಸಲು ಘೋಷಣೆ ಮಾಡಿದೆ ಜೊತೆಗೆ ಅವರ ಹೆಸರಿನಲ್ಲಿ ರಾಷ್ಟ್ರೀಯ ಏಕತಾ ಪ್ರಶಸ್ತಿ ಕೂಡಾ ಕೊಡಮಾಡಲ್ಪಡುತ್ತದೆ.

2018ರಲ್ಲಿ ಏಕತಾ ಪ್ರತಿಮೆಯನ್ನು ನಿರ್ಮಿಸಿ ಪಟೇಲರಿಗೆ ಗೌರವ ಸಲ್ಲಿಸಿದೆ.

ವೈವಿಧ್ಯತೆ ಹೊಂದಿರುವ ದೇಶದಲ್ಲಿ ನಾವುಗಳೆಲ್ಲರು ಸಾಮರಸ್ಯದ ಬದುಕು ಕಟ್ಟಿಕೊಂಡು ನಮ್ಮಲ್ಲಿರುವ ಬೇದ-ಭಾವ ದೂರವಿಟ್ಟು ನಾವೆಲ್ಲರೂ ಭಾರತೀಯರೆಂಬ ಭಾವ ಬೆಳೆಸಿಕೊಂಡು ಏಕತೆಯಿಂದ ಬದುಕೋಣ ಎಂದು ಯಾಳಗಿ ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಎಸ್.ಎಸ್.ಪಾಟೀಲ್ ಅವರು ಏಕತಾ ಪ್ರತಿಜ್ಞಾವಿಧಿಯ ಮಹತ್ವ ತಿಳಿಸಿದರು.

ಹಿರಿಯ ಉಪನ್ಯಾಸಕ ಮಲ್ಲೇಶಪ್ಪ ಬ್ಯಾಗವಾಟ, ಉಮರ್ ದೇವರಮನಿ, ಅಬ್ದುಲ್ ಬೇಗ್ ಉಪನ್ಯಾಸಕ ನಾಗರಾಜ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ರಾಷ್ಟ್ರೀಯ ಸೇವಾ ಯೋಜನಾ ಘಟಕದ ಕಾರ್ಯಕ್ರಮಾಧಿಕಾರಿ ನರಸಣ್ಣ ಸುಂಕೇಶ್ವರ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕ ಮಲ್ಲಿಕಾರ್ಜುನ ಸ್ವಾಮಿ ಸ್ವಾಗತಿಸಿದರು. ಉಪನ್ಯಾಸಕ ಮಾರ್ಟಿನ್ ವಂದಿಸಿದರು

## ಸಾಹಿತಿ ಬಾಬು ಬಂಡಾರಿಗಲ್, ಪತ್ರಕರ್ತ ಶಿವಮೂರ್ತಿ ಹಿರೇಮಠ ಸೇರಿ 6 ಗಣ್ಯರಿಗೆ, ಎರಡು ಸಂಸ್ಥೆಗಳಿಗೆ ರಾಜ್ಯೋತ್ಸವದ ವಿಶೇಷ ಸನ್ಮಾನ

ಯುವ ಮಾರ್ಗ ಸುದ್ದಿ



**ರಾಯಚೂರು,ಅ.31–** ರಾಯಚೂರು ಜಿಲ್ಲೆಯ ಹಿರಿಯ ಸಾಹಿತಿ ಬಾಬು ಬಂಡಾರಿಗಲ್, ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ ಸೇರಿದಂತೆ 6 ಜನ ಗಣ್ಯರಿಗೆ ಹಾಗೂ ಎರಡು ಸಂಸ್ಥೆಗಳಿಗೆ ಕನ್ನಡ ನಾಡು-ನುಡಿಯ ಸೇವೆಗಾಗಿ ರಾಯಚೂರು ಜಿಲ್ಲಾಡಳಿತದಿಂದ ರಾಜ್ಯೋತ್ಸವದ ವಿಶೇಷ ಸನ್ಮಾನ ನಡೆಯಲಿದೆ.

ಕನ್ನಡ ನಾಡು ನುಡಿಗೆ ಸೇವೆ ಸಲ್ಲಿಸಿದ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಕ್ಕಾಗಿ ಸಾಹಿತ್ಯ ಕ್ಷೇತ್ರದಲ್ಲಿ ಹಿರಿಯ ಸಾಹಿತಿ ಬಾಬು ಭಂಡಾರಿಗಲ್, ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ, ವೈದ್ಯಕೀಯ ಕ್ಷೇತ್ರದಲ್ಲಿ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಒಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಿ ಸಾಗರ, ಸಮಾಜ ಸೇವೆ ಕ್ಷೇತ್ರದಲ್ಲಿ ಚಂದ್ರಶೇಖರ ಪಾಟೀಲ್ ಮಿರ್ಜಾಪೂರ, ಕಲಾ ಕ್ಷೇತ್ರದಲ್ಲಿ ಸಿಂಧನೂರು ತಾಲೂಕಿನ ಸುಕಾಲಪೇಟೆ ನಾರಾಯಣಪ್ಪ ಮಾಡ ಶಿರವಾರ, ಕೃಷಿ ಕ್ಷೇತ್ರದಲ್ಲಿ ರಾಯಚೂರು ತಾಲೂಕಿನ ಪಲ್ಕಂದೊಡ್ಡಿ ಗ್ರಾಮದ ಹನುಮರೆಡ್ಡಿ ತಂದೆ ಬಸವರಾಜಪ್ಪ ಹಾಗೂ ಸೇವಾ ಕ್ಷೇತ್ರದಲ್ಲಿ ಸುರಕ್ಷಾ ಟ್ರಸ್ಟ್ ರಾಯಚೂರು ಹಾಗೂ ಕಲಾ ಸಂಕುಲ ಸಂಸ್ಥೆ ರಾಯಚೂರು ಅವರಿಗೆ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನವೆಂಬರ್ 01ರಂದು ನಡೆಯುವ ಕನ್ನಡ ರಾಜ್ಯೋತ್ಸವ ಸಂದರ್ಭದಲ್ಲಿ ಸನ್ಮಾನಿಸಿ, ಗೌರವಿಸಿ ಪ್ರೋತ್ಸಾಹಿಸಲಾಗುತ್ತದೆ ಎಂದು ಕನ್ನಡ ರಾಜೋತ್ಸವ ಆಚರಣೆ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊದಲನೇಯ ಪುಟದಿಂದ

# ನಾಳೆ 11 ಜಿಲ್ಲೆಗಳ 316 ಕೇಂದ್ರಗಳಲ್ಲಿ ಕೆ-ಸೆಟ್ ಪರೀಕ್ಷೆ, ಕ್ಯಾಮರಾ ಕಣ್ಗಾವಲು

ನಡೆದರೆ, ಉಳಿದ ಜಿಲ್ಲೆಗಳಲ್ಲಿ 11 ವಿಷಯಗಳ ಪರೀಕ್ಷೆ ಗಳು ಮಾತ್ರ ನಡೆಯಲಿವೆ. ಈ ಪರೀಕ್ಷೆಗಳಿಗೆ ನೆಗೆಟಿವ್ ಮೌಲ್ಯಮಾಪನ ಇರುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ಬೆಳಿಗ್ಗೆ 10ರಿಂದ ಮಧ್ಯಾಹ್ನ 1ಗಂಟೆವರೆಗೆ ಪರೀಕ್ಷೆಗಳು ನಡೆಯಲಿದ್ದು, ಒಮ್ಮೆಗೇ ಎರಡೂ ಪತ್ರಿಕೆಗಳ (ಪತ್ರಿಕೆ 1 & 2) ಪ್ರಶ್ನೆ ಪತ್ರಿಕೆಗಳನ್ನು ನೀಡಲಾಗುತ್ತದೆ. ಅಭ್ಯರ್ಥಿಗಳು ಮೂರು ಗಂಟೆ ಅವಧಿಯಲ್ಲಿ 100 ಅಂಕಗಳ ಸಾಮಾನ್ಯ ಜ್ಞಾನ ಮತ್ತು 200 ಅಂಕಗಳ ವಿಷಯವಾರು ಪತ್ರಿಕೆಗಳಿಗೆ ಉತ್ತರಿಸಬೇಕಾಗುತ್ತದೆ. ಎರಡೂ ಪತ್ರಿಕೆಗಳಿಗೆ ಪ್ರತ್ಯೇಕ ಓಎಂಆರ್ ನೀಡುತ್ತಿದ್ದು, ಆಯಾಯ ಓಎಂಆರ್ ನಲ್ಲೇ ಅದರ ಉತ್ತರಗಳನ್ನು ಎಚ್ಚರಿಕೆಯಿಂದ ದಾಖಲಿಸಬೇಕು ಎಂದು ಅವರು ಸಲಹೆ ನೀಡಿದ್ದಾರೆ.

ಈ ಹಿಂದಿನ ಎಲ್ಲ ಪರೀಕ್ಷೆಗಳ ಹಾಗೆಯೇ ಈ ಪರೀಕ್ಷೆಗೂ ವಸ್ತ್ರ ಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ಪರೀಕ್ಷಾ ಕೇಂದ್ರಗಳ ಪ್ರವೇಶಕ್ಕೂ ಮುನ್ನ ಅಭ್ಯರ್ಥಿಗಳನ್ನು ಮುಖ ಚಹರೆ ಪತ್ತೆ ಮೂಲಕ ತೀವ್ರ ಶೋಧ ನಡೆಸಿಯೇ ಒಳ ಬಿಡಲಾಗುತ್ತದೆ. ಇದಕ್ಕೆ ಅಗತ್ಯ ಪೊಲೀಸ್ ಮತ್ತು ಗೃಹ ರಕ್ಷಕ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಅವರು ವಿವರಿಸಿದ್ದಾರೆ.

# ಸ್ಪರ್ಧಾತ್ಮಕ ಪರೀಕ್ಷೆಯ ಪೂರ್ವಭಾವಿ ತರಬೇತಿ: ಸಿದ್ಧತಾ ಸಭೆ

ಕೋಡ್ ಬಳಸಿ ಹೆಸರು ನೋಂದಣಿ ಮಾಡಬೇಕು. ಈ ತರಬೇತಿಯು ಜಿಲ್ಲಾ ರಂಗಮಂದಿರದ ಹಿಂದಿನ ಜಿಲ್ಲಾ ಕೇಂದ್ರ ಗ್ರಂಥಾಲಯದ ಹೊಸ ಕಟ್ಟಡದಲ್ಲಿ 30 ದಿನಗಳ ಕಾಲ ನಡೆಯಲಿದೆ. ಈ ತರಬೇತಿಗೆ ಯಾವುದೇ ಪ್ರವೇಶಾತಿ ಮತ್ತು ತರಬೇತಿ ಶುಲ್ಕ ಇರುವುದಿಲ್ಲ. ಪ್ರತಿ ದಿನ 1 ಗಂಟೆಗಳ ಕಾಲ ವಿಶೇಷ ಆಹ್ವಾನಿತರು ಮಾತನಾಡಲಿದ್ದಾರೆ. ಪ್ರತಿ ಭಾನುವಾರವು ವಿಶೇಷ ಆಹ್ವಾನಿತರು ಮಾತನಾಡುವರು ಎಂಬುದಾಗಿ ನೋಡಲ್ ಅಧಿಕಾರಿಗಳು ತಿಳಿಸಿದರು.

ತರಬೇತಿ ಅವಧಿಯಲ್ಲಿ ಅರ್ಥಶಾಸ್ತ್ರ, ಭೌಗೋಳ ಶಾಸ್ತ್ರ, ಪರಿಸರ ಅಧ್ಯಯನ, ವಿಜ್ಞಾನ ಮತ್ತು ತಂತ್ರಜ್ಞಾನ, ಮಾನಸಿಕ ಸಾಮರ್ಥ್ಯ, ಭಾರತ ಸಂವಿಧಾನ, ಇತಿಹಾಸ ಸೇರಿದಂತೆ ಹಲವು ವಿಷಯಗಳ ಪಾಠ ಬೋಧನೆಯ ಬಗ್ಗೆ ನಿರ್ಣಯಿಸಲಾಯಿತು. 30 ದಿನಗಳ ತರಬೇತಿ ಅವಧಿಯಲ್ಲಿ ಪಾಠ ಮಾಡಲು ಪರಿಣಿತ ಸಂಪನ್ಮೂಲ ವ್ಯಕ್ತಿಗಳಾದ ಅಜಿತ್ ಬೆಂಗಳೂರು, ಧ್ರುವಕುಮಾರ್ ಬೆಂಗಳೂರು, ರವಿ ನಾಯ್ಕಲ್ ಬೆಂಗಳೂರು, ಮಲ್ಲಿ ಸ್ವಾಮಿ ರಾಯಚೂರು, ಶರಣ ಬಾಗೂರು ಧಾರವಾಡ, ಅಮರೇಶ ಪೋತ್ನಾಳ್ ರಾಯಚೂರು ಸೇರಿದಂತೆ ಇನ್ನೀತರರನ್ನು ಕರೆಯಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಈ ಸ್ಪರ್ಧಾತ್ಮಕ ಪರೀಕ್ಷೆಯ ಪೂರ್ವಭಾವಿ ತರಬೇತಿ ಶಿಬಿರವು ಯುವಜನರಿಗಾಗಿ ನಗರ, ನಗರಕ್ಕಾಗಿ ಯುವಕರು ಎಂಬ ಅಭಿಯಾನದಡಿ ನಡೆಯಲಿದ್ದು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರ ಮಾರ್ಗದರ್ಶನ ಮತ್ತು ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರ ಮೇಲುಸ್ತುವಾರಿಯಲ್ಲಿ ನಡೆಯಲಿದೆ ಎಂದು ಈ ಕಾರ್ಯಕ್ರಮದ ನೋಡಲ್ ಅಧಿಕಾರಿಗಳು ಸಭೆಗೆ ವಿವರಿಸಿದರು.

# ಆಪರೇಷನ್ ಸಿಂಧೂರ ಉಗ್ರರಿಗೆ ನಡುಕ



**ಕೆವಾಡಿಯಾ,ಅ.31–** ಭಾರತದ ತಂಟೆಗೆ ಬಂದರೆ ಶತ್ರು ಪ್ರದೇಶವನ್ನು ಪ್ರವೇಶಿಸಿ ದಾಳಿ ಮಾಡಬಹುದು ಎನ್ನುವ ಸ್ಪಷ್ಟ ಸಂದೇಶವನ್ನು ಅಪರೇಷನ್ ಸಿಂಧೂರ್ ಜಗತ್ತಿಗೆ ತೋರಿಸಿಕೊ ಟ್ಟಿದೆ. ಈ ಮೂಲಕ. ಪಾಕಿಸ್ತಾನದ ಭಯೋತ್ಪಾದಕರಿಗೆ ನಡುಕ ಹುಟ್ಟಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಹೇಳಿದ್ದಾರೆ.

ಆಪರೇಷನ್ ಸಿಂಧೂರ್ ಸಮಯದಲ್ಲಿ, ಯಾರಾದರೂ ಭಾರತದ ಕಡೆಗೆ ಕಣ್ಣು ಹಾಕಲು ಧೈರ್ಯ ಮಾಡಿದರೆ, ಭಾರತ ಶತ್ರುಗಳ ಪ್ರದೇಶಕ್ಕೆ ಮತ್ತೆ ದಾಳಿ ಮಾಡುತ್ತದೆ ಎನ್ನುವುದನ್ನು ಇಡೀ ಜಗತ್ತು ನೋಡಿದೆ. ಪಾಕಿಸ್ತಾನ ಮತ್ತು ಭಯೋತ್ಪಾದನೆಯನ್ನು ನಿರ್ವಹಿಸುವವರಿಗೆ ಭಾರತದ ನಿಜವಾದ ಶಕ್ತಿ ಏನೆಂದು ತಿಳಿದಿದೆ ಎಂದು ಗುಡುಗಿದ್ದಾರೆ.

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150 ನೇ ಜಯಂತಿಯಂದು ಗುಜರಾತ್ ನ ಕೆವಾಡಿಯದಲ್ಲಿರುವ ಸರ್ದಾರ್ ವಲ್ಲಭಾಯ್ ಪಟೇಲ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಮೋದಿ ಅವರು ಸರ್ದಾರ್ ವಲ್ಲಭಭಾಯಿ ಪಟೇಲ್‌ರವರ ದೃಢವಾದ ದೇಶ ಪರ ಭದ್ರತಾ ನಿಲುವು ಸ್ವಾಭಿಮಾನಿ ಮತ್ತು ಏಕೀಕೃತ ಭಾರತದ ದೃಷ್ಟಿಕೋನವನ್ನು ನಾವು ಮುಂದುವರಿಸುತ್ತಿದ್ದೇವೆ ಎಂದು ಹೇಳಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮ ದಿನಾ ಚರಣೆಯ ಸಂದರ್ಭದಲ್ಲಿ ಭಾರತದ ಶತ್ರುಗಳಿಗೆ ಸ್ಪಷ್ಟ ಸಂದೇಶ ರವಾನಿಸಿದ ಪ್ರಧಾನಿ ನರೇಂದ್ರ ಮೋದಿ ದೇಶದ ತಂಟೆಗೆ ಬಂ ದರೆ ಉಳಿಗಾಲವಿಲ್ಲ ಎಂದಿದ್ದಾರೆ.

**ನಕ್ಸಲಿಸಂ ಕೊನೆಗಾಣಿಸು ಸಂಕಲ್ಪ**–ದೇಶದಲ್ಲಿ ನಕ್ಸಲಿಸಂ ಅನ್ನು ಕೊನೆಗೊಳಿಸುವುದು ಕೇಂದ್ರ ಸರ್ಕಾರದ ಸಂಕಲ್ಪ ಮಾಡಿದೆ ಎಂದು ಹೇಳಿರುವ ಪ್ರಧಾನಿ ನರೇಂದ್ರ ಮೋದಿ ಅವರು ಅಕ್ರಮ ಒಳನುಸುಳುವಿಕೆ, ಮತ್ತು ಜಮ್ಮುಕಾಶ್ಮೀರದ ಸಮಸ್ಯೆಗೆ ಕಾಂಗ್ರೆಸ್ ನೀತಿಯೇ ಕಾರಣ ಎಂದು ವಾಗ್ದಾಳಿ ನಡೆಸಿದ್ದಾರೆ.

ಪ್ರತಿಯೊಬ್ಬ ಒಳನುಸುಳುವವರನ್ನು ದೇಶದಿಂದ ಹೊರಹಾಕುವುದು ಮತ್ತು ದೇಶದಿಂದ ನಕ್ಸಲಿಸಂ ಅನ್ನು ನಿರ್ಮೂಲನೆ ಮಾಡುವುದು ನಮ್ಮ ಗುರಿ ಎಂದು ಹೇಳಿದ್ದಾರೆ.ಸರ್ದಾರ್ ಪಟೇಲ್ ಇಡೀ ಕಾಶ್ಮೀರವನ್ನು ಭಾರತದೊಂದಿಗೆ ಸಂಯೋಜಿಸಲು ಬಯಸಿದ್ದರು ಆದರೆ ಅಂದಿನ ಪ್ರಧಾನಿ ಜವಾಹರಲಾಲ್ ನೆಹರು ಅದಕ್ಕೆ ಅವಕಾಶ ನೀಡಲಿಲ್ಲ ಎಂದು ಆರೋಪಿಸಿದರು.

**ಕಾಂಗ್ರೆಸ್ ನೀತಿ ಕಾರಣ: ವಾಗ್ದಾಳಿ**–ಕಾಶ್ಮೀರವನ್ನು ಪ್ರತ್ಯೇಕ ಸಂವಿಧಾನ ಮತ್ತು ಪ್ರತ್ಯೇಕ ಧ್ವಜದೊಂದಿಗೆ ವಿಭಜಿಸಲಾಯಿತು. ಕಾಶ್ಮೀರದ ಬಗ್ಗೆ ಕಾಂಗ್ರೆಸ್ ಮಾಡಿದ ತಪ್ಪಿನ ಬೆಂಕಿಯಲ್ಲಿ ದೇಶ ದಶಕಗಳ ಕಾಲ ಸುಟ್ಟುಹೋಯಿತು. ಕಾಂಗ್ರೆಸ್ಸಿನ ದುರ್ಬಲ ನೀತಿಗಳಿಂದಾಗಿ, ಕಾಶ್ಮೀರದ ಒಂದು ಭಾಗ ಪಾಕಿಸ್ತಾನದ ಆಕ್ರಮಣಕ್ಕೆ ಒಳಗಾಯಿತು ಎಂದು ಆರೋಪಿಸಿದ್ದಾರೆ. ಕಾಂಗ್ರೆಸ್ ನೀತಿಯಿಂದಾಗಿ ಪಾಕಿಸ್ತಾನ ಭಯೋತ್ಪಾದನೆಯನ್ನು ಪೋಷಿಸಿತು. ಕಾಶ್ಮೀರ ಮತ್ತು ದೇಶವು ಅಂತಹ ಭಾರೀ ಬೆಲೆಯನ್ನು ತೆರಬೇಕಾಯಿತು ಎಂದು ಹೇಳಿದ್ದರು

"ಸ್ವಾತಂತ್ರ್ಯದ ನಂತರ, ಸರ್ದಾರ್ ಪಟೇಲ್ 550 ಕ್ಕೂ ಹೆಚ್ಚು ರಾಜಪ್ರಭುತ್ವದ ರಾಜ್ಯಗಳನ್ನು ಒಗ್ಗೂಡಿಸುವ ಅಸಾಧ್ಯವಾದ ಕೆಲಸವನ್ನು ಸಾಧಿಸಿದರು. ಅವರಿಗೆ 'ಏಕ್ ಭಾರತ್, ಶ್ರೇಷ್ಠ ಭಾರತ'ದ ದೃಷ್ಟಿಕೋನ ಅತ್ಯಂತ ಮಹತ್ವದ್ದಾಗಿತ್ತು" ಎಂದು ಅವರು ತಿಳಿಸಿದರು.

**ಬಲಿಷ್ಠ ಭಾರತ ಸಂಕಲ್ಪ : ಪ್ರಧಾನಿ**–ಏಕೀಕೃತ, ಬಲಿಷ್ಠ ಮತ್ತು ಸ್ವಾವಲಂಬಿ ಭಾರತ ಕೇಂದ್ರದ ಸಂಕಲ್ಪ ಎಂದಿರುವ ಪ್ರಧಾನಿ ನರೇಂದ್ರ ಮೋದಿ ಅವರು ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ದೃಷ್ಟಿಕೋನವನ್ನು ಎತ್ತಿಹಿಡಿಯುವ ಸಾಮೂಹಿಕ ಬದ್ಧತೆ ನಮ್ಮದು ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಹೇಳಿದ್ದಾರೆ.

"ಭಾರತದ ಏಕೀಕರಣದ ಹಿಂದಿನ ಪ್ರೇರಕ ಶಕ್ತಿ ಸರ್ದಾರ್ ಪಟೇಲ್ ಇದು ದೇಶದ ಭವಿಷ್ಯ ರೂಪಿಸಲು ಸಹಕಾರಿಯಾಗಿದೆ ರಾಷ್ಟ್ರೀಯ ಸಮಗ್ರತೆ, ಉತ್ತಮ ಆಡಳಿತ ಮತ್ತು ಸಾರ್ವಜನಿಕ ಸೇವೆಗೆ ಅವರ ಅಚಲ ಬದ್ಧತೆ ಪೀಳಿಗೆಗೆ ಸ್ಫೂರ್ತಿಯಾಗಿದೆ ಎಂದಿದ್ದಾರೆ.

**ಕಾಶ್ಮೀರ ಒಗ್ಗೂಡಿಸುವ ಪ್ರಯತ್ನಕ್ಕೆ ನೆಹರೂ ಅಡ್ಡಗಾಲು**–ರಾಜಪ್ರಭುತ್ವದ ಸಂಸ್ಥಾನಗಳನ್ನು ಒಟ್ಟುಗೂಡಿಸಿದಂತೆ ಸರ್ದಾರ್ ವಲ್ಲಭಭಾಯಿ ಪಟೇಲ್ ಇಡೀ ಕಾಶ್ಮೀರವನ್ನು ಭಾರತದೊಂದಿಗೆ ಒಗ್ಗೂಡಿಸಲು ಬಯಸಿದ್ದರು. ಆದರೆ ಆಗಿನ ಪ್ರಧಾನಿ ಜವಾಹರಲಾಲ್ ನೆಹರು ಅದಕ್ಕೆ ಅವಕಾಶ ನೀಡಲಿಲ್ಲ ಎಂದು ಪ್ರಧಾನಿ ಮೋದಿ ಆರೋಪಿಸಿದರು.

ಗುಜರಾತ್‌ನ ಏಕತಾ ನಗರದಲ್ಲಿ ಏಕತಾ ಪ್ರತಿಮೆ ಬಳಿ ನಡೆದ ಸಮಾವೇಶದಲ್ಲಿ ಪ್ರಧಾನಿ ಮೋದಿ ಕಾಶ್ಮೀರವನ್ನು ಭಾರತದೊಂದಿಗೆ ಒಗ್ಗೂಡಿಸುವ ಸರ್ದಾರ್ ಪಟೇಲ್‌ರವರ ಬಯಕೆಯನ್ನು ಈಡೇರಲು ನೆಹರು ಬಿಡಲಿಲ್ಲ, ಬದಲಾಗಿ ಕಾಶ್ಮೀರವನ್ನು ವಿಭಜಿಸಲಾಯಿತು. ಪ್ರತ್ಯೇಕ ಸಂವಿಧಾನ ಹಾಗೂ ಧ್ವಜವನ್ನು ನೀಡಲಾಯಿತು. ಕಾಂಗ್ರೆಸ್ ತಪ್ಪಿನಿಂದಾಗಿ ದೇಶವು ದಶಕಗಳ ಕಾಲ ಬಳಲಿತ್ತು ಎಂದು ದೂರಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

# ಕುಷ್ಟರೋಗ ಸಮಾಜಿಕ ಪಿಡುಗಾಗಿದ್ದು ನಿರ್ಮೂಲನೆಗೆ ಕ್ರಮ ಕೈಗೊಳ್ಳಲಾಗುವುದು: ಭೀಮರಾಯ.ಬಿ. ರಾಮಸಮುದ್ರ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.31–**ಪಟ್ಟಣದ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಸ್ಪರ್ಶ್ ಕುಷ್ಠರೋಗ ನಿಮೂರ್ಲನ ಕಾರ್ಯಕ್ರಮ ಅಂಗವಾಗಿ ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನ ಅಂಗವಾಗಿ ನಡೆದ ತಾಲೂಕು ಟಾಸ್ಕಫೋರ್ಸ ಸಭೆಯಲ್ಲಿ ತಹಸೀಲ್ದಾರ್ ಭೀಮರಾಯ.ಬಿ. ರಾಮಸಮುದ್ರ ಮಾತನಾಡಿ ವಿಶ್ವಸಂಸ್ಥೆಯ ಆರೋಗ್ಯ ಸಂಸ್ಥೆಯ ಘೋಷಣೆಯಂತೆ 2026 ರಲ್ಲಿ ಶೂನ್ಯ ಪ್ರಕರಣ ಕಡೆ ಹೊಗುವುದಕ್ಕೆ ಮುಂದಾಗಿದ್ದು ಈ ವರ್ಷ ತಾಲೂಕಿನಲ್ಲಿ ಆರೋಗ್ಯ ಇಲಾಖೆಯಿಂದ ಮನೆ ಮನೆಗೆ ಭೇಟಿ ಸಮೀಕ್ಷೆ ನಡೆಸಿದಾಗ 15 ಕುಷ್ಠರೋಗ ಲಕ್ಷಣ ಇರುವ ಪ್ರಕರಣಗಳು ಪತ್ತೆಯಾಗಿದ್ದು ಕಳವಳಕಾರಿಯಾಗಿದೆ .ಕುಷ್ಟರೋಗ ಸಮಾಜಿಕ ಪಿಡುಗಾಗಿದ್ದು ಕುಷ್ಟರೋಗಿಗಳನ್ನು ಸಮಾಜದಲ್ಲಿ ಕೀಳಾಗಿ ಕಾಣುವುದು ಸರಿಯಲ್ಲ ಅವರಿಗೆ ಅಗತ್ಯ ವಿರುವ ಚಿಕಿತ್ಸೆ ಹಾಗೂ ಪುನರ್ವಸತಿ ಕಲ್ಪಿಸುವುದಕ್ಕೆ ಸರ್ಕಾರ ಶ್ರಮಿಸುತ್ತಿದೆ ತಾಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಆರೋಗ್ಯ ಇಲಾಖೆಗೆ ಸಹಕಾರವನ್ನು ನೀಡುವುದರ ಜೊತೆಯಾಗಿ ಸಾರ್ವಜನಿಕರಲ್ಲಿ ಕುಷ್ಠರೋಗ ನಿರ್ಮೂಲನೆ ಕುರಿತು ಜಾಗೃತಿ ಮೂಡಿಸುವಂತೆ ಕರೆ ನೀಡಿದರು.

ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ ಮಾತನಾಡಿ ತಾಲೂಕಿನಲ್ಲಿ ಆರೋಗ್ಯ ಇಲಾಖೆ ವತಿಯಿಂದ ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನವನ್ನು ನ.3 ರಿಂದ ನ.19 ರವರೆಗೆ ತಾಲೂಕಿನಾಧ್ಯಂತ ಹಮ್ಮಿಕೊಳ್ಳಲಾಗಿದ್ದು ನಮ್ಮ ಆರೋಗ್ಯ ಇಲಾಖೆಯ ಸಿಬ್ಬಂದಿಗಳು,ಆಶಾಕಾರ್ಯಕರ್ತೆಯರು ಹಾಗೂ ಸ್ವಯಂಸೇವಕರು ಮನೆಮನೆಗೆ ಭೇಟಿ ನೀಡಿ ಕುಟುಂಬದ ಸದಸ್ಯರ ಶರೀರದ ಮೇಲಿನ ತಿಳಿಬಿಳಿ.ತಾಮ್ರ ವರ್ಣದ,ಸ್ಪರ್ಷ ಜ್ಞಾನವಿಲ್ಲದೆ ಇರುವ ಮಚ್ಚೆ ಇದಲ್ಲಿ ವೈದ್ಯರು ಅಗತ್ಯ ಪರೀಕ್ಷೆಗಳನ್ನು ನಡೆಸಿ ಕುಷ್ಟರೋಗ ಇರುವ ಬಗ್ಗೆ ನಿರ್ಧರ ಕೈಗೊಳ್ಳಲಿದ್ದಾರೆ. ಪ್ರಾರಂಭದಲ್ಲಿ ಕುಷ್ಟರೋಗವನ್ನು ಪತ್ತೆ ಹಚ್ಚಿ ಚಿಕಿತ್ಸೆ ನೀಡಿದಲ್ಲಿ ಕುಷ್ಟರೋಗದಿಂದ ಉಂಟಾಗುವ ಅಂಗವಿಕಲತೆಯನ್ನು ತಪ್ಪಿಸಬಹುದಾಗಿದೆ ತಾಲೂಕನ್ನು ಕುಷ್ಠರೋಗ ಮುಕ್ತವಾಗಿಸ ುವುದಕ್ಕೆ ಶಿಕ್ಷಣ ಇಲಾಖೆಯ ನೆರವಿನಿಂದ ಗ್ರಾಮಗಳಲ್ಲಿ ಶಾಲಾ ಮಕ್ಕಳಿಂದ ಜಾಗೃತಿ ಜಾಥವನ್ನು ಕೂಡ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ, ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿಬಾಬು ಚಿನ್ನು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದರು.

# ಗಡುವು ಮುಗಿದರೂ ರಸ್ತೆಗುಂಡಿ ಮುಚ್ಚಿಲ್ಲ



**ಬೆಂಗಳೂರು, ಅ. 31–** ಬೆಂಗಳೂರಿಗೆ ಮೃತ್ಯುಕೂಪಗಳಾಗಿರುವ ರಸ್ತೆಗುಂಡಿಗಳನ್ನು ಮುಚ್ಚಲು ನೀಡಿದ್ದ ಡೆಡ್‌ಲೈನ್ ಯಾವ ತಾರೀಖಿಗೆ ಮುಗಿಯುತ್ತದೆ ಎಂಬುದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ನೆನಪಿದೆಯೇ. ಇವತ್ತು ಯಾವ ತಾರೀಖು ಎಂಬುದು ಗೊತ್ತಿದೆಯೇ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಪ್ರಶ್ನಿಸಿದ್ದಾರೆ.

ರಸ್ತೆಗುಂಡಿ ಮುಚ್ಚುವ ಗಡುವು ಇಂದಿಗೆ ಮುಗಿದಿದ್ದರೂ ರಸ್ತೆಗುಂಡಿಗಳನ್ನು ಮುಚ್ಚಿಲ್ಲ. ಅಧಿಕಾರಿಗಳು ನಿಮ್ಮ ಮಾತಿಗೆ ಕವಡೆಕಾಸಿನ ಕಿಮ್ಮತ್ತೂ ಕೊಡುತ್ತಿಲ್ಲ. ಇದೊಂದು ನಾಲಾಯಕ್ ಸರ್ಕಾರ. ಜನ ಈ ಸರ್ಕಾರಕ್ಕೆ ಛೀ.. ಥೂ.. ಎಂದು ಉಗಿಯುತ್ತಿದ್ದಾರೆ. ಶಾಪ ಹಾಕುತ್ತಿದ್ದಾರೆ. ರಾಜೀನಾಮೆ ಕೊಟ್ಟು ಮನೆಗೆ ಹೋಗಿ ಕರ್ನಾಟಕವನ್ನು ಉಳಿಸಿ ಎಂದು ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿದ್ದಾರೆ.

ಕಾನೂನು ತಿದ್ದುಪಡಿಯಿಂದ ಮೈಕ್ರೋ ಫೈನಾನ್ಸ್ ಹಾವಳಿ ನಿಲ್ಲುವುದಿಲ್ಲ ಎಂದು ನಾನು ಮಾರ್ಚ್ ತಿಂಗಳಲ್ಲೇ ವಿಧಾನಸಭೆಯಲ್ಲಿ ಹೇಳಿದ್ದೆ. ಈಗ ಅದು ಸಾಬೀತಾಗಿದೆ. ಮುಖ್ಯಮಂತ್ರಿಯವರ ತವರು ಜಿಲ್ಲೆಯಾದ ಮೈಸೂರಿನ ನಂಜನಗೂಡಿನ ಕಂದೆಗಾಲ ಗ್ರಾಮದಲ್ಲಿ ಮೈಕ್ರೋಫೈನಾನ್ಸ್ ಕಂಪೆನಿಯವರು ರೈತರ ಮನೆಗೆ ಬೀಗ ಜಡಿದು ಜಪ್ತಿ ಮಾಡಿರುವ ಘಟನೆ ನಡೆದಿದೆ. ಮೈಕ್ರೋ ಫೈನಾನ್ಸ್‌ನವರ ಹಾವಳಿಯಿಂದ ರೈತರು, ಬಡವರನ್ನು ರಕ್ಷಿಸುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ದೂರಿದ್ದಾರೆ.

ಬೆಂಗಳೂರಿನಲ್ಲಿ ಮಾತೆತ್ತಿದ್ದರೆ ಸುರಂಗ ರಸ್ತೆ, ಸ್ಕೈಡೆಗ್, ಬ್ರ್ಯಾಂಡ್ ಬೆಂಗಳೂರು ಎಂದೆಲ್ಲಾ ದೊಡ್ಡ ದೊಡ್ಡ ಮಾತುಗಳನ್ನಾಡಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೊಗಳೆ ಬಿಡುತ್ತಿದ್ದಾರೆ. ಪಾಲಿಕೆಯ ಶಿಕ್ಷಕರಿಗೆ 6 ತಿಂಗಳಿನಿಂದ. ಪಾಲಿಕೆಯ ಕಿರಿಯ ಆರೋಗ್ಯಾಧಿಕಾರಿಗಳಿಗೆ 8 ತಿಂಗಳಿನಿಂದ, ಪಾಲಿಕೆಯ ಸ್ಮಶಾನ ಸಿಬ್ಬಂದಿಗೂ 8 ತಿಂಗಳಿನಿಂದ ಸಂಬಳ ಕೊಟ್ಟಿಲ್ಲ. ಮೊದಲು ಪಾಲಿಕೆಯ ನೌಕರರಿಗೆ ಸರಿಯಾಗಿ ಸಂಬಳ ಕೊಡಿ ಎಂದು ಆಗ್ರಹಿಸಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ಮತ್ತು ರಾಹುಲ್‌ಗಾಂಧಿಯವರ ಜೋಳಿಗೆ ತುಂಬಿಸಿ ಮುಖ್ಯಮಂತ್ರಿ ಕುರ್ಚಿ ಗಿಟ್ಟಿಸಿಕೊಳ್ಳಲು ಪಾಲಿಕೆ ಅಧಿಕಾರಿಗಳಿಗೆ ಎಷ್ಟು ಸುಲಿಗೆ ಟಾರ್ಗೆಟ್ ಕೊಟ್ಟಿದ್ದೀರಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರೇ. ಮರಣೋತ್ತರ ಪರೀಕ್ಷೆ, ಮರಣ ಪ್ರಮಾಣ ಪತ್ರ, ಅಂತ್ಯಸಂಸ್ಕಾರ ಎಲ್ಲದಕ್ಕೂ ಲಂಚ. ನಿಮ್ಮ ಕುರ್ಚಿ ಆಸೆಗೆ ಜನಸಾಮಾನ್ಯರ ರಕ್ತ ಇನ್ನೆಷ್ಟು ಹೀರುತ್ತೀರಿ ಎಂದು ಅಶೋಕ್ ಆಕ್ರೋಶ ಹೊರ ಹಾಕಿದ್ದಾರೆ.

# ಪೊಲೀಸರು ಲಂಚ ಪಡೆದಿರುವುದು ಸಾಬೀತಾದರೆ ಸೇವೆಯಿಂದ ವಜಾ : ಗೃಹ ಸಚಿವ ಪರಮೇಶ್ವರ್

**ಬೆಂಗಳೂರು, ಅ.31–** ಪೊಲೀಸ್ ಇಲಾಖೆಯ ಸೇವೆಯಲ್ಲಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಲಂಚ ಪಡೆದಿರುವುದು ಸಾಬೀತಾದರೆ ಸೇವೆಯಿಂದಲೇ ವಜಾಗೊಳಿಸಲಾ ಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಚ್ಚರಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಭ್ರಷ್ಟಚಾರವನ್ನು ತಮ ಸರ್ಕಾರ ಸಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನ ಕೆ. ಶಿವಕುಮಾರ್ ಎಂಬುವರು ತಮ ಮಗಳ ಸಾವಿನ ಬಳಿಕ ಮರಣೋತ್ತರ ಪರೀಕ್ಷೆ ಸೇರಿದಂತೆ ವಿವಿಧ ಕೆಲಸಗಳಿಗೆ ಯಾವ ರೀತಿ ಲಂಚ ವಸೂಲಿ ಮಾಡಲಾಯಿತು ಎಂಬುದನ್ನು ಸಾಮಾಜಿಕ ಜಾಲತಾಣದಲ್ಲಿ ಸುಧೀರ್ಘವಾಗಿ ಬರೆದುಕೊಂಡಿದ್ದರು.

ಇದಕ್ಕೆ ಸಂಬಂಧಪಟ್ಟಂತೆ ಬೆಳಂದೂರು ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಮತ್ತು ಕಾನ್ಸ್‌ಟೆಬಲ್ ಅವರನ್ನು ಅಮಾನತುಗೊಳಿಸಲಾಗಿದೆ. ಈ ಕುರಿತಂತೆ ಪ್ರತಿಕ್ರಿಯೆ ನೀಡಿದ ಸಚಿವ ಪರಮೇಶ್ವರ್, ಪೊಲೀಸ್ ಇಲಾಖೆ ಮಾತ್ರವಲ್ಲದೆ ಸರ್ಕಾರದ ಯಾವುದೇ ಇಲಾಖೆಯಲ್ಲಾದರೂ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಲಂಚ ಪಡೆದಿದ್ದರೆ ಅದನ್ನು ಸಹಿಸುವುದಿಲ್ಲ. ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದರು.

ಅದರಲ್ಲೂ ಪ್ರಮುಖವಾಗಿ ಪೊಲೀಸ್ ಇಲಾಖೆಯಲ್ಲಿ ಲಂಚ ಪಡೆದಿದ್ದರೆ ಅದು ಸಾವಿರ ಇರಲಿ, ಐದುನೂರೆ ಇರಲಿ ತಕ್ಷಣವೇ ಅಮಾನತಿನಂತಹ ಕ್ರಮ ಕೈಗೊಂಡು ಇಲಾಖೆಯ ವಿಚಾರಣೆ ನಡೆಸಲಾಗುವುದು. ತನಿಖೆಯಲ್ಲಿ ಲಂಚ ಪಡೆದಿರುವುದು ಸಾಬೀತಾದರೆ ಸೇವೆಯಿಂದಲೇ ವಜಾಗೊಳಿಸಲಾಗುತ್ತದೆ ಎಂದರು. ಇಂತಹ ಪ್ರಕರಣಗಳು ನಮಗಾಗಲೀ ಅಥವಾ ಹಿರಿಯ ಅಧಿಕಾರಿಗಳ ಗಮನಕ್ಕೆ ಬಂದರೆ ತಕ್ಷಣವೇ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಬೇಕೆಂದು ಪೊಲೀಸ್ ಸಮಾವೇಶ ಹಾಗೂ ಇತರ ಸಭೆಗಳಲ್ಲಿ ಸೂಚನೆ ನೀಡಿದ್ದೇವೆ. ಮುಖ್ಯಮಂತ್ರಿ ಕೂಡ ಸ್ಪಷ್ಟ ಆದೇಶ ನೀಡಿದ್ದಾರೆ. ಭ್ರಷ್ಟಚಾರವನ್ನು ಯಾವುದೇ ಹಂತದಲ್ಲೂ ತಾವು ಬೆಂಬಲಿಸುವುದಿಲ್ಲ ಎಂದು ಹೇಳಿದರು.

ಒಳ ಮೀಸಲಾತಿ ವಿಚಾರವಾಗಿ ಹಿಂದಿನ ಸರ್ಕಾರ ಗೊಂದಲ ಮೂಡಿಸಿತ್ತು. ಅದನ್ನು ಸರಿಪಡಿಸಿ, ಕಾನೂನಿಗೆ ಬಲ ನೀಡಲು ನಮ ಸರ್ಕಾರ ಮುಂದಾಗಿದೆ. ಒಳ ಮೀಸಲಾತಿಗೆ ಸಂಬಂಧಪಟ್ಟಂತೆ ನಮ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಲ್ಲಿ ಯಾವುದೇ ಗೊಂದಲಗಳಿಲ್ಲ. ಎ,ಬಿ,ಸಿ,ಡಿ ಎಂಬ ವರ್ಗೀಕರಣ ಮಾಡಿ ಒಳ ಮೀಸಲಾತಿ ಹಂಚಿಕೆ ಮಾಡಲಾಗಿದೆ.

ಅದನ್ನು ಸುಗ್ರಿವಾಜ್ಞೆ ಮೂಲಕ ಜಾರಿಗೊಳಿಸಿ ನಂತರ ಕಾನೂನು ರೂಪಿಸಿ, ಜಾರಿಗೊ ಳಿಸಲು ಚರ್ಚಿಸಲಾಗಿತ್ತು. ಆದರೆ ಮುಖ್ಯಮಂತ್ರಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಸುಗ್ರಿವಾಜ್ಞೆ ಬದಲಾಗಿ ಕಾನೂನು ರೂಪಿಸಿ ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಮಂಡಿಸಲು ಕಾನೂನು ಸಚಿವರಿಗೆ ಸೂಚನೆ ನೀಡಲಾಗಿದೆ ಎಂದರು.

ಬಿಜೆಪಿಯ ಸಂಸದ ಗೋವಿಂದ ಕಾರಜೋಳ ಅವರಿಗೆ ಒಳ ಮೀಸಲಾತಿ ವಿಚಾರ ಅರ್ಥವಾಗಿಲ್ಲ. ಅವರ ಸರ್ಕಾರ ಆಡಳಿತದಲ್ಲಿ ಸಾಕಷ್ಟು ಗೊಂದಲ ಮೂಡಿಸಿತ್ತು. ನಾವು ಅದನ್ನು ಸರಿಪಡಿಸಿ ಮತ್ತು ಕಾನೂನಿನ ಶಕ್ತಿ ನೀಡಲು ಮುಂದಾಗಿದ್ದೇವೆ ಎಂದರು.

ಧರ್ಮಸ್ಥಳದ ಪ್ರಕರಣದಲ್ಲಿ ಎಸ್‌ಐಟಿ ತನಿಖೆಗೆ ಹೈಕೋರ್ಟ್ ತಡೆ ನೀಡಿರುವ ಆದೇಶವನ್ನು ತಾವು ಓದಿಲ್ಲ. ಈ ಬಗ್ಗೆ ಕಾನೂನು ಇಲಾಖೆ ಅಡ್ವೊಕೇಟ್ ಜನರಲ್ ಹಾಗೂ ಕಾನೂನು ತಜ್ಞರ ಜೊತೆ ಚರ್ಚೆ ಮಾಡುತ್ತೇವೆ. ಹೈಕೋರ್ಟ್ ಆದೇಶಕ್ಕೆ ಮೇಲನವಿ ಸಲ್ಲಿಸಬೇಕೇ ಅಥವಾ ಸುಪ್ರಿಂಕೋರ್ಟ್ ಮೊರೆ ಹೋಗಬೇಕೆ? ಯಾವ ರೀತಿಯ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಚರ್ಚಿಸಿ ನಿರ್ಧರಿಸುತ್ತೇವೆ. ಎಸ್‌ಐಟಿ ತಂಡ ತನಿಖೆಯ ವರದಿಯನ್ನು ಒಂದೆರಡು ದಿನಗಳಲ್ಲಿ ಸಲ್ಲಿಸುವ ಸಾಧ್ಯತೆಯಿದೆ ಎಂದರು.

# ಒಂದು ಕೋಟಿ ಉದ್ಯೋಗ ಸೃಷ್ಟಿ ಮಹಿಳೆಯರ ಕಲ್ಯಾಣಕ್ಕೆ ಒತ್ತು ಎನ್‌ಡಿಎ ಸಂಕಲ್ಪ ಪತ್ರ ಬಿಡುಗಡೆ

**ಪಾಟ್ನಾ, ಅ.31–** ಬಿಹಾರದಲ್ಲಿ ಸರ್ಕಾರಿ ಮತ್ತು ಖಾಸಗಿ ವಲಯದಲ್ಲಿ ಒಂದು ಕೋಟಿಗೂ ಹೆಚ್ಚು ಉದ್ಯೋಗ ಸೃಷ್ಟಿ,ಮಹಿಳೆಯರ ಕಲ್ಯಾಣ ಸೇರಿದಂತೆ ಹಲವು ಯೋಜನೆಗಳನ್ನು ಎನ್ ಡಿಎ ಮೈತ್ರಿಕೂಟ ಇಂದಿಲ್ಲಿ ಪ್ರಕಟಿಸುವ ಮೂಲಕ ಜನ ಮನಗೆಲ್ಲಲು ಮುಂದಾಗಿದೆ

ಬಿಹಾರ ವಿಧಾನಸಭೆಯಲ್ಲಿ ಮತ್ತೊಮ್ಮೆ ಜನ ಮನಗೆದ್ದು ಅಧಿಕಾರ ಹಿಡಿಯಲು ಕಸರತ್ತು ನಡೆಸಿರುವ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ ಸಂಕಲ್ಪ ಪತ್ರ' ಬಿಡುಗಡೆ ಮಾಡಿದ್ದು ವಿವಿಧ ಕ್ಷೇತ್ರಗಳಲ್ಲಿ ದೊಡ್ಡ ಪ್ರಮಾಣದ ಉದ್ಯೋಗ, ಮಹಿಳಾ ಸಬಲೀಕರಣ ಮತ್ತು ಕಲ್ಯಾಣ ಕ್ರಮಗಳನ್ನು ಜಾರಿ ಮಾಡುವುದಾಗಿ ಭರವಸೆ ನೀಡಿದೆ.

ಕೇಂದ್ರ ಸಚಿವ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಮುಖ್ಯಮಂತ್ರಿ ನಿತೀಶ್ ಕುಮಾರ್, ಕೇಂದ್ರ ಸಚಿವ ಮತ್ತು ಎಚ್‌ಎಎಂ ನಾಯಕ ಜಿತನ್ ರಾಮ್ ಮಾಂಝಿ, ಕೇಂದ್ರ ಸಚಿವ ಮತ್ತು ಎಲ್‌ಜೆಪಿ ರಾಮ್ ವಿಲಾಸ್ ಮುಖ್ಯಸ್ಥ ಚಿರಾಗ್ ಪಾಸ್ವಾನ್, ಆರ್‌ಎಲ್‌ಎಂ ನಾಯಕ ಉಪೇಂದ್ರ ಕುಶ್ವಾಹ ಮತ್ತು ಇತರ ಮೈತ್ರಿಕೂಟದ ನಾಯಕರ ಸಮ್ಮುಖದಲ್ಲಿ ಸಂಕಲ್ಪ ಪತ್ರ ಬಿಡುಗಡೆ ಮಾಡಿ ಎನ್ ಡಿಎ ಒಕ್ಕೂಟ ಅಧಿಕಾರ ಬಂದ ನಂತರ ಎಲ್ಲಾ ಭರವಸೆ ಈಡೇರಿಸತ್ತೇವೆ ಎಂದು ವಾಗ್ದಾನ ಮಾಡಿದ್ದಾರೆ.ಪ್ರತಿ ಜಿಲ್ಲೆಯಲ್ಲಿ ಮೆಗಾ ಕೌಶಲ್ಯ ಕೇಂದ್ರ ಆರಂಭ, ಮುಖ್ಯಮಂತ್ರಿ ಮಹಿಳಾ ರೋಜ್‌ಗಾರ್ ಯೋಜನೆಯಡಿಯಲ್ಲಿ, ವ್ಯವಹಾರ ಪ್ರಾರಂಭಿಸಲು ಮಹಿಳೆಯರಿಗೆ 2 ಲಕ್ಷ ರೂ.ಗಳವರೆಗೆ ಆರ್ಥಿಕ ನೆರವು ಸೇರಿದಂತೆ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ ಜನರಿಗೆ ಭರಪೂರ ಭರವಸೆಯ ವಾಗ್ದಾನ ಮಾಡಿದೆ.

ರಾಜ್ಯದಲ್ಲಿ ಒಂದು ಕೋಟಿ ಮಹಿಳೆಯರನ್ನು 'ಲಖ್‌ಪತಿ ದೀದಿ'ಗಳನ್ನಾಗಿ ಮಾಡುವುದು, ವರ್ಷಕ್ಕೆ 1 ಲಕ್ಷ ರೂ.ಗಿಂತ ಹೆಚ್ಚು ಆದಾಯ ಗಳಿಸುವ ಮಹಿಳೆಯರನ್ನು ಮಾಡುವ ಗುರಿಯನ್ನು ಹೊಂದಿದೆ. ಯಶಸ್ವಿ ಮಹಿಳಾ ಉದ್ಯಮಿಗಳು ತಮ್ಮ ಉದ್ಯಮಗಳನ್ನು ಹೆಚ್ಚಿಸುವಲ್ಲಿ ಬೆಂಬಲ ನೀಡಲು 'ಮಿಷನ್ ಕೋಟ್ಯಾಧಿಪತಿ'ಯನ್ನು ಪರಿಚಯಿಸುವ ಉದ್ದೇಶ ಹೊಂದಿರುವುದಾಗಿ ಪ್ರಕಟಿಸಿದೆ.

ಬಿಹಾರದ ಅತ್ಯಂತ ಹಿಂದುಳಿದ ವರ್ಗಗಳಿಗೆ ಉದ್ದೇಶಿತ ಆರ್ಥಿಕ ಮತ್ತು ಸಾಮಾಜಿಕ ಬೆಂಬಲವನ್ನು ಮೈತ್ರಿಕೂಟ ಭರವಸೆ ನೀಡಿದ್ದು ಕುಟುಂಬಗಳು 10 ಲಕ್ಷ ರೂಪಾಯಿ ನೆರವು ಪಡೆಯಲಿದ್ದು, ಈ ಗುಂಪುಗಳ ಸಾಮಾಜಿಕ-ಆರ್ಥಿಕ ಸ್ಥಿತಿಗತಿಗಳನ್ನು ನಿರ್ಣಯಿಸಲು ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗುವುದು. ಎಂದು ಭರವಸೆ ನೀಡಿದೆ.ರೈತರಿಗಾಗಿ, ಎನ್‌ಡಿಎ ಕರ್ಪೂರಿ ಠಾಕೂರ್ ಕಿಸಾನ್ ಸಮ್ಮಾನ್ ನಿಧಿ ಘೋಷಿಸಿದೆ, ಇದರ ಅಡಿಯಲ್ಲಿ ಪ್ರತಿಯೊಬ್ಬ ರೈತರು ಪ್ರತಿ ಬೆಳೆ ಋತುವಿಗೆ 3,000 ರೂ.ಗಳಂತೆ ಒಟ್ಟು ವಾರ್ಷಿಕ 9,000 ರೂ.ಗಳನ್ನು ಪಡೆಯಲಿದ್ದಾರೆ ಎನ್ನುವುದು ಸೇರಿದಂತೆ ಹಲವು ಭರವಸೆಯನ್ನು ಪ್ರಕಟಿಸಿದ್ದು ಮೈತ್ರಿಕೂಟ ಅಧಿಕಾರಕ್ಕೆ ಬಂದರೆ ಎಲ್ಲಾ ಭರವಸೆ ಜಾರಿ ಮಾಡುವುದಾಗಿ ವಾಗ್ದಾನ ನೀಡಿದೆ.

**ಖರೀದಿ ಕೇಂದ್ರ ಆರಂಭ**–ಪ್ರತಿ ಪಂಚಾಯತ್‌ನಲ್ಲಿ ಭತ್ತ, ಗೋಧಿ, ದ್ವಿದಳ ಧಾನ್ಯಗಳು ಮತ್ತು ಮೆಕ್ಕೆಜೋಳದಂತಹ ಪ್ರಮುಖ ಬೆಳೆಗಳಿಗೆ ಖರೀದಿ ಕೇಂದ್ರಗಳನ್ನು ತೆರೆಯುವುದು ಎನ್ ಡಿ ಎ ಗುರಿ ಎಂದು ಸಂಕಲ್ಪ ಪತ್ರದಲ್ಲಿ ತಿಳಿಸಿದೆ ಜೊತೆಗೆ ನೀರಾವರಿ, ಗೋದಾಮುಗಳು ಮತ್ತು ಆಹಾರ ಸಂಸ್ಕರಣಾ ಘಟಕಗಳು ಸೇರಿದಂತೆ ಕೃಷಿ ಮೂಲಸೌಕರ್ಯದಲ್ಲಿ 1 ಲಕ್ಷ ಕೋಟಿ ರೂಪಾಯಿಗಳ ಹೂಡಿಕೆಯನ್ನು ವಾಗ್ದಾನ ಮಾಡಲಾಗಿದೆ.




**ಬಿಹಾರ ಹಾಲು ಮತ್ತು ಮೀನುಗಾರಿಕೆ ಮಿಷನ್**–ಗ್ರಾಮೀಣ ಆರ್ಥಿಕತೆ ಹೆಚ್ಚಿಸಲು, ಬಿಹಾರ ಹಾಲು ಮಿಷನ್ ಅನ್ನು ಘೋಷಿಸಿದ್ದು ಡೈರಿ ವಲಯವನ್ನು ಸುಧಾರಿಸಲು ಪ್ರತಿ ಬ್ಲಾಕ್‌ನಲ್ಲಿ ಶೀತಲೀಕರಣ ಮತ್ತು ಸಂಸ್ಕರಣಾ ಕೇಂದ್ರಕ್ಕೆ ಮತ್ತಷ್ಟು ಪೂರಕವಾಗಿದೆ. ರೈತರು ಮತ್ತು ಮೀನುಗಾರರು ಮಾರುಕಟ್ಟೆಗಳಿಗೆ ಉತ್ತಮ ಪ್ರವೇಶ ಮತ್ತು ಆದಾಯದ ಅವಕಾಶಗಳನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು, ಹೊಸ ಕ್ಲಸ್ಟರ್‌ಗಳು ಮತ್ತು ಶೀತಲೀಕರಣ ಸೌಲಭ್ಯಗಳ ಮೂಲಕ ಮೀನುಗಾರಿಕೆ ಅಭಿವೃದ್ಧಿಯನ್ನು ಉತ್ತೇಜನದ ಗುರಿ ಹೊಂದಲಾಗಿದೆ.

# ಚಿರಕಾಲ ಬೆಳಗಲಿ ಕನ್ನಡದ ದೀಪ : ಡಾ.ಗಾಯತ್ರಿ




**ಔರಾದ್ : ಅ.31–**ಕನ್ನಡ ಪ್ರಪಂಚದ ಶ್ರೇಷ್ಠ ಸಂಸ್ಕೃತಿಯಾಗಿದ್ದು, ಇದನ್ನು ಈ ಕನ್ನಡದ ದೀಪ ಚಿರಕಾಲ ಉಳಿಸಿ ಬೆಳೆಸುವ ಕಾರ್ಯ ನಾವು ಮಾಡಬೇಕಿದೆ ಎಂದು ತಾಲೂಕು ವೈದ್ಯಾಧಿಕಾರಿ ಡಾ. ಗಾಯತ್ರಿ ವಿಜಯಕುಮಾರ ಹೇಳಿದರು

ಕರ್ನಾಟಕ ರಾಜ್ಯೋತ್ಸವ ನಿಮಿತ್ತ ತಾಲೂಕಿನ ಚಿಂತಾಕಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲೂಕು ಆಡಳಿತದ ವತಿಯಿಂದ ನಡೆದ ಕರುನಾಡ ಸಾಂಸ್ಕೃತಿಕ ಉತ್ಸವ ನಾಲ್ಕನೇ ದಿನದ ಉಪನ್ಯಾಸ ಮಾಲಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದ 'ರು.ತೆಲಂಗಾಣ ಗಡಿ ಭಾಗದ ಈ ನೆಲದಲ್ಲಿ ಕನ್ನಡ ಪಸರಿಸುವ ಕಾರ್ಯ ನಿರಂತರವಾಗಿ ಜರುಗಬೇಕು, ಭಾಷೆ ಹಾಗೂ ಅಕ್ಷರ ಜ್ಞಾನದ ಅಧ್ಯಯನ ಅತ್ಯಾವಶ್ಯಕವಾಗಿದ್ದು, ಕನ್ನಡಿಗರಾದ ನಾವು ಪ್ರತಿಯೊಬ್ಬರ ಹೃದಯದಲ್ಲಿ ಕನ್ನಡ ಜ್ಯೋತಿ ಬೆಳಗಬೇಕು ಎಂದರು.

ಅಂಬೇಡ್ಕರ್ ವಸತಿ ಶಾಲೆಯ ಮುಖ್ಯ ಶಿಕ್ಷಕಿ ರೇಣುಕಾ ಮಾತನಾಡಿ, ಕನ್ನಡ ಭಾಷೆ ಅತಿ ಪ್ರಾಚೀನ ಹಾಗೂ ಶ್ರೀಮಂತ ಭಾಷೆಯಾಗಿದೆ, ಅದು ಸಮೃದ್ಧವಾದ ಶಬ್ದ ಸಂಪತ್ತು, ವ್ಯಾಕರಣ, ಛಂದಸ್ಸು ಮತ್ತು ಅಲಂಕಾರಿಕ ವಿಷಯಗಳನ್ನು ಹೊಂದಿದೆ. ಕನ್ನಡ ಭಾಷೆಯು ಪ್ರಾಚೀನ ಇತಿಹಾಸವನ್ನು ಹೊಂದಿದ್ದು, ಕವಿರಾಜ ಮಾರ್ಗದಂತಹ ಮಹತ್ವದ ಕೃತಿಗಳಿಂದಾಗಿ ಶ್ರೇಷ್ಠ ಸ್ಥಾನವನ್ನು ಗಳಿಸಿದೆ ಎಂದರು.

# ರಾಜ್ಯದ 1310 ಗ್ರಾಮ ಪಂಚಾಯತಿಗಳ ಅಭಿವೃದ್ಧಿಗೆ 'ಕಾಯಕ ಗ್ರಾಮ'



**ಕಲಬುರಗಿ,ಅ.31–**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇ-ಆಡಳಿತ ವಿಭಾಗವು ಪಂಚತಂತ್ರ 2.0 ತಂತ್ರಾಂಶದಲ್ಲಿ ಗ್ರಾಮ ಪಂಚಾಯತ್ ಕಾರ್ಯಕ್ಷಮತೆ ಶ್ರೇಯಾಂಕ ವರದಿಯಲ್ಲಿ ಗುರುತಿಸುವಂತೆ ಕೊನೆಯ ಸ್ಥಾನಗಳಲ್ಲಿರುವ ಗ್ರಾಮ ಪಂಚಾಯತಿಗಳನ್ನು ವೈಜ್ಞಾನಿಕವಾಗಿ ಆಯ್ಕೆ ಮಾಡಿಕೊಂಡು ಅಂತಹ ಗ್ರಾಮ ಪಂಚಾಯತಿಗಳ ಸಮರ್ಪಕ ಹಾಗೂ ನಿಗದಿತವಾಗಿ ಪರಿವೀಕ್ಷಣೆ ಮಾಡುವುದು, ಮಾರ್ಗದರ್ಶನ ನೀಡುವುದಲ್ಲದೆ ವಿವಿಧ ಅಭಿವೃದ್ಧಿ ಇಲಾಖೆಗಳ ಸಮನ್ವಯ ಕಾರ್ಯಕೈಗೊಂಡು ಗ್ರಾಮ ಪಂಚಾಯತಿಗಳ ಸಮಗ್ರ ಅಭಿವೃದ್ಧಿಯನ್ನು ಸಾಧಿಸುವ ಜವಾಬ್ದಾರಿಯನ್ನುತಾಲ್ಲೂಕು, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಅಧಿಕಾರಿಗಳು ವಹಿಸಿಕೊಳ್ಳುವ ಮೂಲಕ ಗ್ರಾಮಗಳ ಸಮಗ್ರ ಪ್ರಗತಿಯ ಆಶಯವನ್ನು ಹೊಂದಿದ 'ಕಾಯಕ ಗ್ರಾಮ' ಪರಿಕಲ್ಪನೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ ನೀಡಿದರು.

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವಿಡಿಯೊ ಸಭೆಯಲ್ಲಿ ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಅನಾವರಣಗೊಳಿಸಿದ ಸಚಿವರು ಮಹಾತ್ಮ ಗಾಂಧೀಜಿಯವರು ಗ್ರಾಮ ಸ್ವರಾಜ್ಯದ ಮೂಲಕ ಸ್ವಾವಲಂಬಿ ಗ್ರಾಮಗಳ ಕನಸು ಕಂಡಿದ್ದರು, ಈ ನಿಟ್ಟಿನಲ್ಲಿ 2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯ ಹಿರಿಯ ಅಧಿಕಾರಿಗಳಿಂದ ಗ್ರಾಮ ಪಂಚಾಯತಿಗಳನ್ನು ದತ್ತು ಪಡೆದು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಗ್ರಾಮ ಪಂಚಾಯತಿ ದತ್ತು ಕಾರ್ಯಕ್ರಮವನ್ನು ಆರಂಭಿಸಲಾಗುವುದು ಎಂದು ಮುಖ್ಯಮಂತ್ರಿಗಳು ಘೋಷಿಸಿದ್ದರು. ಈ ಘೋಷಣೆಯನ್ನು ಈಡೇರಿಸಲು 'ಕಾಯಕ ಗ್ರಾಮ' ಕಾರ್ಯಕ್ರಮವನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ಬಸವಣ್ಣನವರ ಸಂದೇಶದಂತೆ ಕಾಯಕದ ಮೂಲಕ ಎಲ್ಲವನ್ನೂ ಸಾಧಿಸಬಹುದು, ಈ ಸಂದೇಶವನ್ನು ಸಾಕಾರಗೊಳಿಸುವ ಧ್ಯೇಯದೊಂದಿಗೆ ಕಾಯಕ ಗ್ರಾಮ ಯೋಜನೆಯನ್ನು ಅನುನಗೊಳಿಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಜಿಲ್ಲಾ ಪಂಚಾಯತಿ ಮಟ್ಟದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಆರು ಮಂದಿ ಅಧಿಕಾರಗಳು, ತಾಲ್ಲೂಕು ಮಟ್ಟದಲ್ಲಿ ಮೂವರು ಅಧಿಕಾರಿಗಳು ಹಾಗೂ ರಾಜ್ಯ ಮಟ್ಟದಲ್ಲಿ ಜಿಲ್ಲಾವಾರು ನೇಮಕ ಮಾಡಲಾಗಿರುವ ನೋಡಲ್ ಅಧಿಕಾರಿಗಳು ಹಿಂದುಳಿದಿರುವಂತಹ ತಲಾ ಎರಡು ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿಕೊಳ್ಳಬೇಕಾಗಿದ್ದು, ಈಗಾಗಲೇ ಈ ಉದ್ದೇಶಕ್ಕಾಗಿ 1310 ಗ್ರಾಮ ಪಂಚಾಯತಿಗಳನ್ನು ಗುರುತಿಸಲಾಗಿದೆ, ಈ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಅಧಿಕಾರಿಗಳು ಜಿಲ್ಲಾ ಪಂಚಾಯತಿ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ತೀವ್ರ ತೆರನಾದ ಚಟುವಟಿಕೆಗಳನ್ನು ಹಮ್ಮಿಕೊಂಡು ಕಾಲಮಿತಿಯಲ್ಲಿ ಗ್ರಾಮಗಳ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸಬೇಕೆಂದು ಸಚಿವರು ಸೂಚನೆ ನಿಡಿದರು.

ಆಯ್ಕೆ ಮಾಡಿಕೊಳ್ಳಲಾದ ಗ್ರಾಮ ಪಂಚಾಯತಿಗಳಲ್ಲಿ ಶಾಸನಬದ್ಧ ಸಭೆಗಳ ಆಯೋಜನೆ, ಜನರಿಂದ, ಜನರಿಗಾಗಿ ಹಾಗೂ ಜನರಿಗೋಸ್ಕರ ಪ್ರಜಾಸತ್ತಾತ್ಮಕ ಪ್ರಕ್ರಿಯೆ ಮೂಲಕ ಗ್ರಾಮ ಪಂಚಾಯತಿ ದೂರದೃಷ್ಟಿ ಯೋಜನೆ ಸಿದ್ಧಪಡಿಸುವುದು ಸೇರಿದಂತೆ ಗ್ರಾಮೀಣ ಸಮುದಾಯಕ್ಕೆ ಶುದ್ಧ ಕುಡಿಯುವ ನೀರು, ಸ್ವಚ್ಛ ಪರಿಸರಕ್ಕಾಗಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ, ಆರೋಗ್ಯ ರಕ್ಷಣೆ, ಶೈಕ್ಷಣಿಕ ಪ್ರಗತಿ, ಮೂಲ ಸೌಕರ್ಯ ಅಭಿವೃದ್ಧಿ, ಬಾಪೂಜಿ ಸೇವಾ ಕೇಂದ್ರದ ಮೂಲಕ ಅಗತ್ಯ ಸೇವೆಗಳನ್ನು ನೀಡುವುದು, ಕೂಸಿನ ಮನೆ ಮತ್ತು ಅರಿವು ಕೇಂದ್ರಗಳ ಬಲ ವರ್ಧನೆ, ಮಹಿಳೆ, ಮಕ್ಕಳು ಮತ್ತು ವಿಶೇಷ ಚೇತನರ ಅಭಿವೃದ್ಧಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ, ಗ್ರಾಮೀಣ ವಲಸೆ ತಪ್ಪಿಸಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ, ಎಲ್ಲಕ್ಕಿಂತ ಹೆಚ್ಚಾಗಿ ಗ್ರಾಮ ಪಂಚಾಯತಿಗಳು ಸ್ವಾವಲಂಬಿಯಾಗುವ ದಿಸೆಯಲ್ಲಿ ತೆರಿಗೆ, ದರ ಮತ್ತು ಶುಲ್ಕಗಳ ನಿಗದಿ ಹಾಗೂ ಸಂಗ್ರಹಣೆಯನ್ನು ಹೆಚ್ಚಿಸುವುದು. ಸಂಪನ್ಮೂಲಗಳ ಸದ್ಬಳಕೆ ಹಾಗೂ ಹಣಕಾಸು ಶಿಸ್ತನ್ನು ಸಾಧಿಸಲು ಲೆಕ್ಕ ಪತ್ರಗಳ ಕ್ರಮಬದ್ಧ ನಿರ್ವಹಣೆ ಕುರಿತಂತೆ ಅಗತ್ಯ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳಬೇಕಾಗಿರುತ್ತದೆ ಎಂದೂ ಸಚಿವರು ತಿಳಿಸಿದರು. ಗ್ರಾಮ ಪಂಚಾಯತಿಗಳನ್ನು ಅತ್ಯುತ್ತಮವಾಗಿ ಅಭಿವೃದ್ಧಿಪಡಿಸಿದ ಅಧಿಕಾರಿಗಳನ್ನು ಪುರಸ್ಕರಿಸಲಾಗುವುದು ಎಂದೂ ಸಚಿವರು ಪ್ರಕಟಿಸಿದರು.

ಆಯ್ಕೆ ಮಾಡಿಕೊಂಡ ಗ್ರಾಮ ಪಂಚಾಯತಿಗಳ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ಸುಧಾರಣೆಯಾಗಬೇಕಾಗಿರುವ ಅಂಶಗಳ ಕುರಿತಂತೆ ಜನಪ್ರತಿನಿಧಿಗಳ ಸಹಭಾಗಿತ್ವದಲ್ಲಿ ಕ್ರಿಯಾ ಯೋಜನ 'ಯನ್ನು ರೂಪಿಸಿಕೊಳ್ಳಬೇಕು. ಪ್ರತಿ ಹದಿನೈದು ದಿನಕ್ಕೊಮ್ಮೆ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಪ್ರಗತಿಯನ್ನು ಪರಿಶೀಲಿಸಿ, ಅಗತ್ಯ ಸಲಹೆ ಹಾಗೂ ಸಮನ್ವಯ ಕಾರ್ಯಗಳನ್ನು ಕೈಗೊಳ್ಳುವುದು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಹಾಗೂ ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್) ರವರು ಮಾಸಿಕ ಪ್ರಗತಿ ಪರಿಶೀಲನೆಯನ್ನು ಕೈಗೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದ ಸಚಿವರು ಬದ್ಧತಾಪೂರ್ಣವಾಗಿ ಕಾರ್ಯನಿರ್ವಹಿಸುವ ಮೂಲಕ ಕಾಯಕ ಗ್ರಾಮ ಕಾರ್ಯಕ್ರಮವನ್ನು ಅನುನಗೊಳಿಸಬೇಕೆಂದು ಸಲಹೆ ಮಾಡಿದರು. 'ಕಾಯಕ ಗ್ರಾಮ' ಅನುಷಸಠಾನದಿಂದ ಆಶಿಸಲಾಗಿರುವ ಸುಧಾರಣೆಗಳ ಬಗ್ಗೆ ವಿವರಗಳನ್ನು ಹೊಂದಿದ ಕೈಪಿಡಿಯನ್ನು ಸಚಿವರು ಬಿಡುಗಡೆ ಮಾಡಿದರು.

ಅಧಿಕಾರಿಗಳು ತಮ್ಮ ಪಾಲಿನ ಈ ವಿಶೇಷ ಜವಾಬ್ದಾರಿಯನ್ನು ಹೆಚ್ಚಿನ ಹೊಣೆಗಾರಿಕೆ ಎಂದು ಭಾವಿಸದೆ ಉತ್ಸಾಹದಿಂದ ಅನುಷ್ಠಾನಗೊಳಿಸಬೇಕೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲಾ ಹೇಳಿದರು. ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಡಿ.ರಂದೀಪ್, ಪಂಚಾಯತ್ ರಾಜ್ ಆಯುಕ್ತೆ ಡಾ.ಅರುಂಧತಿ ಚಂದ್ರಶೇಖರ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕಾಗಿಸಹಿ ಸಂಗ್ರಹ ಅಭಿಯಾನ: ಗೋಲಶೆಟ್ಟಿ

**ಬಳ್ಳಾರಿ, ಅ.31–** ಪ್ರತ್ಯೇಕ ಉತ್ತರ ಕರ್ನಾಟಕ ರಾಜ್ಯಕ್ಕಾಗಿ ಒಂದು ಕೋಟಿ ಜನರಿಂದ ಇಲ್ಲಿವರೆಗೆ ಸಹಿ ಸಂಗ್ರಹ ಆಗಿದೆ. ಇನ್ನು ಮುಂದೆ ಜನ ಪ್ರತಿನಿಧಿಗಳ ಸಹಿ ಸಂಗ್ರಹ ಮಾಡಲಿದೆಂದು ಉತ್ತರ ಕರ್ನಾಟಕ ಹೋರಾಟ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ, ನಾಗೇಶ ಗೋಲಶೆಟ್ಟಿ ಹೇಳಿದ್ದಾರೆ.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿ. ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಜದ 15 ಜಿಲ್ಲೆಗಳಿಂದ ಕೂಡಿಸಿ ಉತ್ತರ ಕರ್ನಾಟಕ ಮಾಡಬೇಕಿದೆ. ಕಾರಣ ಈ ವರೆಗೆ ರಾಜ್ಯ ಸರ್ಕಾರದಿಂದ. ಅಭಿವೃದ್ಧಿಯಲ್ಲಿ ಆಗಿರುವ ಮಲತಾಯಿ ಧೋರಣೆಯಿಂದ ಎಂದರು. ಇದಕ್ಕೆ ಉತ್ತರ ಎಂದರೆ ಈಗ ಪ್ರಕಟವಾಗಿರುವ 74 ರಾಜ್ಯೋತ್ಸವ ಪ್ರಶಸ್ತಿಗಳಲ್ಲಿ ಕೇವಲ 24 ಮಾತ್ರ ದೊರೆತಿವೆ. ಮಾಧ್ಯಮ ಕ್ಷೇತ್ರದ ನಾಲ್ಕು ಜನರಲ್ಲಿ ಉತ್ತರ ಕರ್ನಾಟಕದ ಒಬ್ಬರಿಗೂ ಇಲ್ಲ ಎಂದರು.

ಕರ್ನಾಟಕ ಏಕೀಕರಣದ ಹೋರಟದ ಮೂಲಕ ಅಸ್ತಿತ್ವಕ್ಕೆ ಬಂದಿದೆ ಎಂಬ ಭಾವನಾತ್ಮಕ ಕಾರಣಕ್ಕೆ ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಕೆಲವರ ಬೆಂಬಲ ಇಲ್ಲ.

ರಾಜ್ಯವನ್ನು ಪ್ರತ್ಯೇಕಗೊಳಿಸುವ, ನಾಡನ್ನು ಒಡೆಯುವ ನಾಡ ದ್ರೋಹದ ಕೆಲಸ ಅಲ್ಲ ಅಪಾರ್ಥ ಮಾಡಿಕೊಳ್ಳದೆ ಮತ್ತೊಂದು ಕನ್ನಡ ನಾಡನ್ನು ನಿರ್ಮಾಣ ಮಾಡುವ ಸಂಕಲ್ಪವನ್ನು ನಾವೆಲ್ಲ ಮಾಡಬೇಕಾಗಿದೆ ನಮ್ಮ ಭಾಗದ ಯುವಕರು ವಿದ್ಯಾರ್ಥಿಗಳು ನಿರುದ್ಯೋಗಿಗಳು ರೈತರು ಮಹಿಳೆಯರು ಕಾರ್ಮಿಕರು ಎಲ್ಲ ವರ್ಗದ ಜನರು ಸುಖ ಸಮೃದ್ಧಿ ನೆಮ್ಮದಿಯಿಂದ ಬದುಕ 'ಬೇಕಾದರೆ ಉತ್ತರ ಕರ್ನಾಟಕವು ಪ್ರತ್ಯೇಕಗೊಂಡು ಹೊಸ ನಾಡು ನಿರ್ಮಾಣವಾಗಬೇಕಾಗಿದೆ ಎಂದರು.




ಈ ಭಾಗದ ಎಲ್ಲಾ ವರ್ಗದ ರಾಜಕಾರಣಿಗಳು ಜನಪ್ರತಿನಿಧಿಗಳು ಮುಕ್ತವಾಗಿ ತಮ್ಮ ಅಭಿಪ್ರಾಯವನ್ನು ನಿಶ್ಚಿತ ಅಭಿಪ್ರಾಯವನ್ನು ನೀಡಿ ಸಹಿ ಸಂಗ್ರಹಣೆಗೆ ಸಹಕಾರ ನೀಡಿ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಬೇಕಾಗಿದೆಂದರು.

ಸುದ್ದಿಗೋಷ್ಟಿಯಲ್ಲಿ ಎನ್.ಗಂಗೀರೆಡ್ಡಿ,ವಿಜಯಕುಮಾರ ಗಂಜಿ ಇದ್ದರು.

# ಮಕ್ಕಳನ್ನು ಕೂಲಿಗೆ ಕಳಿಸಬೇಡಿ ಶಾಲೆಗೆ ಕಳುಹಿಸಿರಿ : ಬಂಡೆಮ್ಮ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.31–**ಪಾಲಕರು ತಮ್ಮ ಮಕ್ಕಳನ್ನು ಕೂಲಿಗೆ ಕಳಿಸದೇ, ಶಾಲೆಗೆ ಕಳು ಹಿಸಿ ಅವರಿಗೆ ಶಿಕ್ಷಣ ಕೊಡಿಸಿ ಅವರ ಬದುಕನ್ನು ಉಜ್ವಲಗೊಳಿಸಿರಿ ಎಂದು ಪಟ್ಟಣದ ಬಾಲಕಿಯರ ಪ್ರೌಢಶಾಲಾ ಶಿಕ್ಷಕಿ ಬಂಡೆಮ್ಮ ಅವರು ಪಾಲಕರಿಗೆ ಕರೆ ಕೊಟ್ಟರು.

ಅವರು ಗುರುವಾರದಂದು ಪಟ್ಟಣದ ಶ್ರೀ ಪಂಪಾ ವಿರೂಪಾಕ್ಷೇಶ್ವರ ಕಲ್ಮಠ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಸಮುದಾಯದತ್ತ ಶಾಲಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು ಮಕ್ಕಳು ಬುದ್ಧಿವಂತರಾಗಬೇಕಾದರೆ ಪಾಲಕ, ಶಿಕ್ಷಕ, ಬಾಲಕ ಈ ಮೂವರು ತಮ್ಮ ,ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸಿದಾಗ ಮಕ್ಕಳು ವಿದ್ಯಾವಂತರಾಗಿ ಉತ್ತಮ ಸಮಾಜ ನಿರ್ಮಾಣವಾಗಲು ಸಾದ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ಮಂಜುನಾಥ್ ಕಮತರ್ ಅವರು ಮಾತನಾಡಿ ಹಿರಿಯರಿಗೆ, ಗುರುಗಳಿಗೆ ಗೌರವಿಸುವ ಗುಣವನ್ನು ಮಕ್ಕಳಿಗೆ ಕಲಿಸಿರಿ,ಶಿಕ್ಷಣದ ಜೊತೆಗೆ ಸಂಸ್ಕಾರ ಮುಖ್ಯ. ಶಾಲೆಯಲ್ಲಿ ಹೇಳಿದ ಪಾಠಗಳನ್ನು ಮಕ್ಕಳು ಮನೆಯಲ್ಲಿ ಓದಲು, ಬರೆಯಲು



ತಿಳಿಸಿರಿ ಎಂದರು.

ಕಲ್ಮಠ ಪ್ರೌಢಶಾಲೆಯ ಮುಖ್ಯ ಗುರುಗಳಾದ ಪ್ರಭಯ್ಯ ಸ್ವಾಮಿ ಮತ್ತು ಪಾಲಕರಾದ ಹನುಮಂತ ಕೋಟೆ ಇವರು ಮಾತನಾಡಿದರು. ಹಿರಿಯ ಶಿಕ್ಷಕ ಕೇಮ್ಯ ನಾಯ್ಕ್, ಕಲ್ಮಠ ಪ್ರಾಥಮಿಕ ಶಾಲೆಯ ಖಜಾಂಚಿಗಳಾದ ಕೃಪಾಸಾಗರ ಪಾಟೀಲ್, ಪದವಿ ಕಾಲೇಜಿನ ಪ್ರಾಚಾರ್ಯರಾದ ಸಿದ್ದನಗೌಡ ಪಾಟೀಲ್ ಶಿಕ್ಷಕಿ ಮಹಾಂತಮ್ಮ ಶಾಲಾ ಸಂಸತ್ ಸದಸ್ಯರಾದ ಕಾವೇರಿ ಬಸವರಾಜ್ ಬಿ.ಕೆ. ಮಲ್ಲಿಕಾರ್ಜುನ್ ಮಕ್ಕಳು, ಪಾಲಕರು ಭಾಗವಹಿಸಿದ್ದರು.

ಕುಮಾರಿ ರಿಜ್ವಾನ ಬೇಗಂ ಕಾರ್ಯಕ್ರಮ ನಿರೂಪಿಸಿದರು, ಶಿಕ್ಷಕಿ ರೂಪ ಸ್ವಾಗತಿಸಿದರು ಶಿಕ್ಷಕಿ ಪವಿತ್ರ ವಂದಿಸಿದರು,ಶಿಕ್ಷಕಿ

## ಇಂದು ಜಿಲ್ಲಾಡಳಿತದಿಂದ ಕನ್ನಡ ರಾಜ್ಯೋತ್ಸವ ದಿನಾಚರಣೆ

**ರಾಯಚೂರು,ಅ.31–**ಇಲ್ಲಿನ ಜಿಲ್ಲಾಡಳಿತದ ವತಿಯಿಂದ ಕನ್ನಡ ರಾಜ್ಯೋತ್ಸವ ದಿನಾಚರಣೆ–2025ರ ಅಂಗವಾಗಿ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನವೆಂಬರ್ 01ರ ಬೆಳಿಗ್ಗೆ 9ಗಂಟೆಗೆ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಧ್ವಜಾರೋಹಣ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಜಿಲ್ಲಾಡಳಿತ ಪ್ರಕಟಣೆ ತಿಳಿಸಿದೆ.

## ಜೆಸ್ಕಾಂ ಗ್ರಾಮೀಣ: ನವಂಬರ್ 02ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಅ.31–**ಜೆಸ್ಕಾಂ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ಹಾಗೂ ಪಿಜಿಸಿಐಎಲ್ ಅವರು 765 ಕೆವಿಎ ಮಾರ್ಗ ಸ್ಥಳಾಂತರಿಸುವ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ನವಂಬರ್ 02ರ ಬೆಳಿಗ್ಗೆ 11ಗಂಟೆಯಿಂದ ಸಂಜೆ 4ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು–560001, ಇವರಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು ಎಂದು ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಾಹಿತಿ ಆಯುಕ್ತರಾದ ಬಿ ವೆಂಕಟಸಿಂಗ್ ಪ್ರವಾಸ

**ರಾಯಚೂರು,ಅ.31–**ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ನವಂಬರ್ ಮಾಹೆಯಲ್ಲಿ ರಾಯಚೂರು ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿದ್ದಾರೆ.ರಾಯಚೂರು ಜಿಲ್ಲೆಯಲ್ಲಿ ನವೆಂಬರ್ 01ರಂದು ಬೆಳಿಗ್ಗೆ 9 ಗಂಟೆಗೆ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ನಡೆಯುವ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಅಂದು ರಾಯಚೂರಲ್ಲಿ ವಾಸ್ತವ್ಯ ಮಾಡುವರು. ನವೆಂಬರ್ 2ರಂದು ರಾಯಚೂರಿನಲ್ಲಿ ವಾಸ್ತವ್ಯ ಮಾಡಲಿದ್ದಾರೆ. ನವಂಬರ್ 3ರಂದು ಬೆಳಿಗ್ಗೆ 7 ಗಂಟೆಗೆ ರಾಯಚೂರಿನಿಂದ ಕಲಬುರಗಿ ನಗರಕ್ಕೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಆಯುಕ್ತರ ಆಪ್ತ ಸಹಾಯಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೊಯೋಲ ಸಮಾಜ ಸೇವಾ ಕೇಂದ್ರದಿಂದ ಅಲೆಮಾರಿ ಮಕ್ಕಳಿಗಾಗಿ ಸಂಜೆ ಕಲಿಕಾ ಕೇಂದ್ರ ಉದ್ಘಾಟನೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.31–** ಪಟ್ಟಣದ ಕರಡಿಗುಡ್ಡ ವೃತ್ತದಲ್ಲಿ ಅಲೆಮಾರಿ ಕುಟುಂಬಗಳ ಮಕ್ಕಳ ಶೈಕ್ಷಣಿಕ ಕಲಿಕೆಗಾಗಿ ಲೊಯೋಲ ಸಮಾಜ ಸೇವಾ ಕೇಂದ್ರದಿಂದ ಸಂಜೆ ಕಲಿಕಾ ಕೇಂದ್ರವನ್ನು ಆರಂಭಿಸಲಾಯಿತು. ಲೊಯೋಲ ಶಿಕ್ಷಣ ಸಂಸ್ಥೆಗಳು ಹಾಗೂ ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದ ಫಾ.ಸಿಪ್ರಿಯನ್ ಅವರು ಕಲಿಕಾ ಕೇಂದ್ರವನ್ನು ಉದ್ಘಾಟಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಲೊಯೋಲ ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದ ಫಾ.ಸಿಪ್ರಿಯನ್ ಅವರು, "ಅಲೆಮಾರಿ ಸಮುದಾಯವು ಸಮಾಜದ ಕಟ್ಟಕಡೆಯ ಸಮುದಾಯವಾಗಿದ್ದು, ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದೆ. ಇಂತಹ ಸಮುದಾಯವು ಜಾಗೃತರಾಗಿ, ಸಂಘಟನೆಗೊಂಡು ಸಂವಿಧಾನ ಬದ್ಧ ಹಕ್ಕುಗಳನ್ನು ಪಡೆಯಲು ಹೋರಾಟ ನಡೆಸಬೇಕು. ಜೊತೆಗೆ, ತಮ್ಮ ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಶಿಕ್ಷಣಕ್ಕೆ ಒತ್ತು ಕೊಡಬೇಕು ಮತ್ತು ಶ್ರಮಿಸಬೇಕು" ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ, ನಿವೃತ್ತ ಶಿಕ್ಷಕರು ಮತ್ತು ಅಲೆಮಾರಿ ಸಮಾಜದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಮಹಾದೇವಪ್ಪ ಮಾಸ್ಟರ್ ಅವರು ಮಾತನಾಡಿ, "ನಮ್ಮ ಅಲೆಮಾರಿ ಸಮುದಾಯ ಊರೂರು ಸುತ್ತಿ ಬದುಕಲು ನೆಲೆ ಇಲ್ಲದೆ ಕಡು ಕಷ್ಟಪಟ್ಟು ಬದುಕುತ್ತಿದೆ. ಈ ಸಮಾಜವು ಡಾ.ಬಿ.ಆರ್.ಅಂಬೇಡ್ಕರ್ ಅವರ ವಿಚಾರಧಾರೆಗಳ ಅಡಿಯಲ್ಲಿ ಸಂಘಟಿತರಾಗಿ ನಮ್ಮ



ಹಕ್ಕುಗಳನ್ನು ಪಡೆಯಲು ಹೋರಾಟ ಮಾಡಬೇಕು" ಎಂದು ಕರೆ ನೀಡಿದರು. ಅಲ್ಲದೆ, ಲೊಯೋಲ ಸಮಾಜ ಸೇವಾ ಕೇಂದ್ರವು ಮಾಡುತ್ತಿರುವ ಹಲವಾರು ಸಮಾಜಮುಖಿ ಕೆಲಸಗಳ ಪ್ರಯೋಜನಗಳನ್ನು ಅಲೆಮಾರಿ ಜನಾಂಗವು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಸಂಜೆ ಕಲಿಕಾ ಕೇಂದ್ರದಲ್ಲಿ ಒಟ್ಟು 60 ಜನ ಮಕ್ಕಳು ಭಾಗವಹಿಸಿದ್ದರು. ಮಕ್ಕಳಿಗೆ ನೋಟ್ ಪುಸ್ತಕಗಳನ್ನು ವಿತರಣೆ ಮಾಡಲಾಯಿತು.

ವೇದಿಕೆಯ ಮೇಲೆ ಅಲೆಮಾರಿ ಸಮುದಾಯದ ಮುಖಂಡರಾದ ಬಸಪ್ಪ, ಲಾಲಪ್ಪ, ಮತ್ತು ಲಕ್ಷಣ ಜಾನೇಕಲ್ ಅವರು ಉಪಸ್ಥಿತರಿದ್ದರು. ಇವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾ ಯಿತು.

ಕಲಿಕಾ ಕೇಂದ್ರದ ಶಿಕ್ಷಕಿ ನಿರ್ಮಲ ಇನರು ಅವರು ಕಾರ್ಯಕ್ರಮವನ್ನು ಸ್ವಾಗತಿಸಿದರು ಮತ್ತು ರವೀಂದ್ರ ಜಾನೇಕಲ್ ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

## ಶ್ರೀ ವಿಜಯದಾಸರ 270 ನೇ ಆರಾಧನಾ ಮಹೋತ್ಸವದ ವೈಭವದ ಮಧ್ಯರಾಧನೆ

ಯುವ ಮಾರ್ಗ ಸುದ್ದಿ

**ಮಾನ್ವಿ ,ಅ.31–**ತಾಲೂಕಿನ ಚೀಕಲಪರ್ವಿ ಗ್ರಾಮದಲ್ಲಿನ ತುಂಗಭದ್ರ ನದಿ ತೀರದಲ್ಲಿನ ಶ್ರೀ ಮಂತ್ರಾಲಯ ಶ್ರೀ ರಾಘವೇಂದ್ರಸ್ವಾಮಿಗಳ ಮಠದ ಶ್ರೀ ಲಕ್ಷ್ಮೀ ನರಸಿಂಹ ಸನ್ನಿದಾನದಲ್ಲಿ ಶ್ರೀ ವಿಜಯದಾಸರ ಕಟ್ಟೆಯಲ್ಲಿ ಶ್ರೀ ವಿಜಯದಾಸರ 270 ನೇ ಆರಾಧನಾ ಮಹೋತ್ಸವದ ಮಧ್ಯರಾಧನೆ ಅಂಗವಾಗಿ ಶುಕ್ರವಾರ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ಮೂರ್ತಿಗೆ ಬೆಳಿಗ್ಗೆ ಸುಪ್ರಭಾತ ,ಅಷ್ಟೋತ್ತರ ಪಾರಾಯಣ ಮತ್ತು ವಿಜಯಕವಚ ಪಾರಾಯಣ, ವಿಶೇಷವಾದ ಫಲಪಂಚಾಮೃತ ಅಭಿಷೇಕ, ಕನಕಮಹಾಪೂಜೆ, ನಡೆಯಿತು. ಬೆಳಿಗ್ಗೆ 11 ಕ್ಕೆ ಗ್ರಾಮದ ರಾಜಬೀದಿಗಳಲ್ಲಿ ಶ್ರೀ ವಿಜಯದಾಸರ ಭಾವಚಿತ್ರದೊಂದಿಗೆ ವಿವಿಧ ಭಜನ ಮಂಡಳಿಯವರಿಂದ ಯಾಯಿಯಾರ ಗೋಪಾಳ ನಡೆಯಿತು.

ಶ್ರೀ ವಿಜಯದಾಸರ ಕಟ್ಟೆಯಲ್ಲಿ ಶ್ರೀ ವಿಜಯದಾಸರ ರಜತ ಉತ್ಸವ ಮೂರ್ತಿಗೆ ಅರ್ಚನೆ,ಅಭಿಷೇಕ ನಡೆಸಲಾಯಿತು. ಶ್ರೀ ವಿಜಯದಾಸರ ಕಟ್ಟೆಗೆ ವಿಶೇಷವಾದ ಹೂವಿನ ಅಲಂಕಾರ ಮಾಡಲಾಯಿತು. ಶ್ರೀ ಮಂತ್ರಾಲಯ ಶ್ರೀ ರಾಘವೇಂದ್ರಸ್ವಾಮಿಗಳ ಮಠದ ವಿದ್ವಾಂಸರಿಂದ ಪ್ರವಚನ ನಡೆಯಿತು. ರಾಯಚೂರಿನ ಶೇಷಗೀರಿದಾಸರಿಂದ ದಾಸವಾಣಿ ಕಾರ್ಯಕ್ರಮ ನಡೆಯಿತು.

ಸಂಜೆ ಪಲ್ಲಕ್ಕಿ ಸೇವೆ,ಸ್ವಾಸ್ತಿವಾಚನ ಮಹಾಮಂಗಳಾರತಿ,ಶ್ರೇಯಃ



ಪ್ರಾರ್ಥನೆ ನಡೆದವು. ಶ್ರೀ ಲಕ್ಷ್ಮೀ ನರಸಿಂಹ ಸನ್ನಿದಾನದ ಗೌರವಾ ವಿಚಾರಣಾ ಕರ್ತರಾದ ವಿಜಯೇಂದ್ರಾಚಾರ್ ಇಭರಾಮಪೂರ್, ಅರ್ಚಾಕರಾದ ಶ್ರೀರಾಘವೇಂದ್ರಚಾರ್ ಸೇರಿದಂತೆ ಗ್ರಾಮದ ಭಕ್ತರು, ಬ್ರಹ್ಮಣ ಸಮಾಜದವರು ಹಾಗೂ ಸಾವಿರಾರು ಭಕ್ತರು ಭಾಗವಹಿಸಿದರು.

## ಉಪ ವಿಭಾಗಾಧಿಕಾರಿಗೆ ಕೃಷ್ಣಬೈರೇಗೌಡ ತರಾಟೆ

**ಬೆಂಗಳೂರು, ಅ.31–**ನಿಮಗೆ ಎಷ್ಟು ಜನ ಏಜೆಂಟ್ ಇದ್ದಾರೆ, ಆ ಪೈಕಿ ಅಧಿಕೃತ ಏಜೆಂಟ್ ಯಾರೆಂಬ ಬೋರ್ಡ್ ಹಾಕಿಬಿಡಿ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಉಪ ವಿಭಾಗಾಧಿಕಾರಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ವಿಕಾಸಸೌಧದಲ್ಲಿಂದು ನಡೆದ ಎಸಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ತಕರಾರು ಪ್ರಕರಣಗಳ ವಿಲೇವಾರಿ ಸಂಬಂಧ ಎಲ್ಲಾ ಉಪ ವಿಭಾಗಾಧಿಕಾರಿಗಳ ಜೊತೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವರು, ಬೆಂಗಳೂರು ಉತ್ತರ ವಿಭಾಗದ ಉಪ ವಿಭಾಗಾಧಿಕಾರಿ ಕಿರಣ್ ಅವರನ್ನು ತರಾಟೆಗೆ ತೆಗೆದುಕೊಂಡರು,

ಸಭೆಯಲ್ಲಿ ಉಪ ವಿಭಾಗಾಧಿಕಾರಿಯವರ ಬೆವರಿಳಿಸಿದ ಅವರು, ಜನರು ತಮ ಕೆಲಸಗಳಿಗೆ ಏಜೆಂಟರನ್ನೆ ಭೇಟಿಯಾಗಿಬಿಡಲಿ. ನೀವೂ ನನಗೇ ಸಿಗಲ್ಲ ಅಂದರೆ ಇನ್ನೂ ಜನರ ಕಥೆ ಏನು? ಎಂದು ಪ್ರಶ್ನಿಸಿದರು.

ಉಪ ವಿಭಾಗಾಧಿಕಾರಿಗಳ ನ್ಯಾಯಾಲ ಯದಲ್ಲಿ ಬಾಕಿರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥ ಗೊಳಿಸಬೇಕು. ಅನಗತ್ಯವಾಗಿ ಪ್ರಕರಣಗಳನ್ನು ವಿಲೇವಾರಿ ಮಾ ಡದೇ ವಿಳಂಬ ಮಾಡಬಾರದು ಎಂದು ಸಚಿವರು ಸೂಚಿಸಿದರು.

## ಜೆಸ್ಕಾಂ ನಗರ: ನವಂಬರ್ 2ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಅ.31–** ಜೆಸ್ಕಾಂ ನಗರದ ವಿಭಾಗದಿಂದ ನಗರದಲ್ಲಿ ಲಿಂಕ್ ಲೈನ್ ಕಾಮಗಾರಿ ಕೈಗೊಳ್ಳುತ್ತಿರುವ ಪ್ರಯುಕ್ತ ನವೆಂಬರ್ 2ರ ಬೆಳಿಗ್ಗೆ 11ಗಂಟೆಯಿಂದ ಸಂಜೆ 4 ಗಂಟೆಯವರಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ 11ರಿಂದ ಏಗ್ನೂರ್ ದೇವಸ್ತಾನ, ಆರ್.ಡಿ.ಎ ಲೆಔಟ್, ಕೃಷ್ಣದೇವರಾಯ ಕಾಲೋನಿ, ತಿರುಮಲ ಹಿಲ್ಸ್, ಸುಚಿತ್ರ ಕಾಲೋನಿ, ಆಶೀರ್ವಾದ ಕಾಲೋನಿ, ಟೌನ್‌ಶಿಪ್, ನವೋದಯಾ ಇಂಜಿನಿಯರಿಂಗ್ ಕಾಲೇಜು, ಸಿದ್ರಾಂಪುರ, ಅಮರ್‌ಖೇಡ್ ಲೇಔಟ್, ಲಕ್ಷಣ್ ಲೇಔಟ್, ವಿಜಯಲಕ್ಷ್ಮಿ ?? ಲೇಔಟ್, ಯಾಸಿನ್ ಜಿಮ್, ಕೆಎಸ್‌ಆರ್‌ಟಿಸಿ ಬಸ್ ಡಿಪೋ–3, ಎಎಮ್‌ಐ ಡೆಂಟಲ್ ಕಾಲೇಜು, ಮಾಣಿಕ್ ಪ್ರಭು ಲೇಔಟ್ ನಗರ, ಸರಕಾರಿ ಪಾಲಿಟೆಕ್ನಿಕ್ ಕಾಲೇಜು, ಸರಕಾರಿ ಐಟಿಐ ಕಾಲೇಜು, ನ್ಯೂ ಎನ್.ಜಿ.ಓ ಕಾನೋನಿ, ವಿದ್ಯಾನಗರ, ವಾಸಾವಿ ನಗರ, ಸಾವಿತ್ರಿ ಕಾಲೋನಿ, ಎಲ್.ವಿ.ಡಿ. ಕಾಲೇಜು, ತಿಮ್ಮಾಪುರ್ ಪೇಟೆ, ರಾಯಚೂರು ವಾಣಿ, ಬಿ.ಆರ್.ಬಿ ಕಾಲೇಜು, ಅಶೋಕ್ ನಗರ, ಜಹಿರಬಾದ್, ಜಡಿ ತೋಟ, ಶಶಿ ಮಹಲ್ ಟಾಕೀಸ್ ಸರ್ಕಲ್, ಮಂಗಳವಾರಪೇಟೆ, ನೇತಾಜಿ ನಗರ, ಬಂಗಾರ್ ಬಜಾರ, ಪಟೇಲ್ ರಸ್ತೆ, ಗೀತಾ ಮಂದಿರ್ ರಸ್ತೆ, ಬ್ರೇಸ್ತವಾರಪೇಟೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಜೆಸ್ಕಾಂ ನಗರ–2: ಜೆಸ್ಕಾಂ ನಗರ–2ರ ವ್ಯಾಪ್ತಿಯ ಶಿವಂ ಅಸ್ಪತ್ರೆ, ಮಾಂಗಲ್ಯ ಶಾಪಿಂಗ್ ಮಾಲ್, ಲೋಹಾರವಾಡಿ, ಗಾಂಧಿ ಚೌಕ, ಬಂದಾರಗಾಲ್ಲಿ, ಎಂ.ಜಿ.ರಸ್ತೆ, ಹರಿಹರ ರಸ್ತೆ, ಮಕ್ತಲ ಪೇಟೆ, ಪಿಂಜರವಾಡಿ, ಶರಣಬಸವೇಶ್ವರ ಆಸ್ಪತ್ರೆ. ಬೆಟ್ಟದೂರ ಆಸ್ಪತ್ರೆ. ಪ್ಯಾರೇಸ್ ಗಾರ್ಡನ್, .ಕುಂಬಾರ ಓಣಿ, ಮಡ್ಡಿ ಪೇಟೆ , ಬ್ರೆಸ್ತಾವಾರ ಪೇಟೆ, ಚಂದ್ರ ಮಾಳೇಶ್ವರ ಚೌಕ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಸಂಬಂಧಿಸಿದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

**ರಾಯಚೂರು,ಅ.31–** ಕರ್ನಾಟಕ ಮಾಧ್ಯಮ ಅಕಾಡೆಮಿಯು 2025ನೇ ಸಾಲಿನ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗಾಗಿ ಪತ್ರಕರ್ತರಿಂದ ಲೇಖನಗಳನ್ನು ಆಹ್ವಾನಿಸಿದೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಾಜ್ಯದ ವಿವಿಧ ಮಾಧ್ಯಮ ಸಂಸ್ಥೆಗಳು ಈ ಕೆಳಕಂಡಂತೆ ದತ್ತಿನಿಧಿ ಪ್ರಶಸ್ತಿಗಳನ್ನು ಸ್ಥಾಪಿಸಿವೆ: ಬೆಂಗಳೂರಿನ 'ಅಭಿಮಾನಿ ಪ್ರಕಾಶನ' ಸಂಸ್ಥೆಯು ರಾಜ್ಯ ಮತ್ತು ಜಿಲ್ಲಾಮಟ್ಟದ ಕನ್ನಡ ಪತ್ರಿಕೆಗಳಲ್ಲಿ 'ಸಾಮಾಜಿಕ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ–ವರದಿಗಳಿಗೆ "ಅಭಿಮಾನಿ ಪ್ರಶಸ್ತಿ, ಮೈಸೂರಿನ 'ಮೈಸೂರು ದಿಗಂತ' ಪತ್ರಿಕಾ ಸಂಸ್ಥೆಯು "ಮಾನವೀಯ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ–ವರದಿಗಳಿಗೆ "ಮೈಸೂರು ದಿಗಂತ ಪ್ರಶಸ್ತಿ. ಬೆಂಗಳೂರಿನ ಅಭಿಮನ್ಯು ಪತ್ರಿಕೆ ಸಂಸ್ಥೆಯು ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ ಅಂಕಣ / ಸಂಪಾದಕೀಯ / ಪರಿಣಾಮಕಾರಿ ವರದಿಗೆ "ಅಭಿಮನ್ಯು ಪ್ರಶಸ್ತಿ, ಬೆಂಗಳೂರಿನ "ಪ್ರಜಾ ಸಂದೇಶ ಪತ್ರಿಕಾ ಸಂಸ್ಥೆಯು ಶೋಷಣೆಯನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಲೇಖನಕ್ಕೆ : "ಪ್ರಜಾ ಸಂದೇಶ ದತ್ತಿ ಪ್ರಶಸ್ತಿ' ಗಳನ್ನು ಸ್ಥಾಪಿಸಿವೆ. ಈ ದತ್ತಿ ಪ್ರಶಸ್ತಿಗಳು ತಲಾ ಹತ್ತು ಸಾವಿರ ರೂ ನಗದು ಬಹುಮಾನ ಒಳಗೊಂಡಿವೆ.

ಈ ಪ್ರಶಸ್ತಿಗಳಿಗೆ ಆಸಕ್ತ ಪತ್ರಕರ್ತರು 01–01–2025 ರಿಂದ 25–10–2025ರವರೆಗೆ ಪ್ರಕಟವಾಗಿರುವ/ ಪ್ರಸಾರವಾಗಿರುವ ತಮ್ಮ ಒಂದು ಲೇಖನ/ವರದಿಯನ್ನು ಕಳುಹಿಸಬಹುದು.

ಕನ್ನಡ ದೈನಿಕ ಟಿವಿ–ವಾಹಿನಿ,ವಾರ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರು ಹೆಸರು (ಬೈಲೈನ್) ಬರೆದಿರುವ ವರದಿ ಲೇಖನಗಳನ್ನು ಮಾತ್ರ ಪ್ರಶಸ್ತಿಗೆ ಪರಿಗಣಿಸಲಾಗುವುದು. ಲೇಖನ–ವರದಿಗಳಲ್ಲಿ ಹೆಸರು (ಬೈಲೈನ್) ಪ್ರಕಟವಾಗದಿದ್ದಲ್ಲಿ ಸಂಬಂಧಿಸಿದ ಪತ್ರಿಕೆಯ ಸಂಪಾದಕರಿಂದ ದೃಢೀಕರಣ ಪತ್ರವನ್ನು ಪಡೆದು ಕಳುಹಿಸಬೇಕು.ಲೇಖನ/ವರದಿಗಳ ಲಕೋಟೆಯಲ್ಲಿ ಯಾವ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸುತ್ತಿರುವುದು ಎಂಬುದನ್ನು 'ಅಭಿಮಾನಿ ಪ್ರಶಸ್ತಿ– 2025, 'ಮೈಸೂರು ದಿಗಂತ ಪ್ರಶಸ್ತಿ–2025', "ಅಭಿಮನ್ಯು ಪ್ರಶಸ್ತಿ–2025 ಹಾಗೂ "ಪ್ರಜಾ ಸಂದೇಶ ದತ್ತಿ ಪ್ರಶಸ್ತಿ –2025 ಎಂದು ಸ್ಪಷ್ಟವಾಗಿ ಬರೆದು ಲೇಖನಗಳನ್ನು ಇದೇ 12–11–2025ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

**ರಾಯಚೂರು,ಅ.31–** ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ನವೆಂಬರ್ 1 ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.ನವೆಂಬರ್ 01ರ ಬೆಳಿಗ್ಗೆ 9 ಗಂಟೆಗೆ ಜಿಲ್ಲಾಡಳಿತದ ವತಿಯಿಂದ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗಿಯಾಗುವರು.ಮಧ್ಯಾಹ್ನ 12 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಸೇಡಂಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ಕೃಷ್ಣಗೌಡ ತಾಯಣ್ಣವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H